ಸಂಪುಟ : 10 ಸಂಚಿಕೆ: 69 ಪುಟ : 4+2 ಬೆಲೆ: 3.00 ಮಂಗಳವಾರ ಏಪ್ರಿಲ್ 15 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 69 Pages : 4+2 Price : 3.00 Tuesday April 15 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಏಪ್ರಿಲ್ 19ರಿಂದ 'ಸಮಾನತೆಯ ರಥಯಾತ್ರೆ'

■ ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ಸಮಾನತೆ ಮಂದಿರ ಪ್ರತಿಷ್ಠಾಪನೆ ಮಹಾಸಭಾ ವತಿಯಿಂದ 'ಸಮಾನತೆಯ ರಥಯಾತ್ರೆ–ಸಮಾನತೆಯ ಬುತ್ತಿ' ಎಂಬ ವಿಶಿಷ್ಟ ಕಾರ್ಯಕ್ರಮವನ್ನು ಏಪ್ರಿಲ್ 19ರಿಂದ ಬಸವ ಜಯಂತಿವರೆಗೆ ಗದಗ ಜಿಲ್ಲೆಯಾದ್ಯಂತ ಆಯೋಜಿಸಲಾಗಿದೆ.

ಸಮಾಜದಲ್ಲಿ ಇಂದಿಗೂ ಅಸ್ತಿತ್ವದಲ್ಲಿರುವ ಅಸಮಾನತೆಯನ್ನು ದೂರಮಾಡಿ, ಸಮಾನತೆಯ ಸಾರವನ್ನು ಹೆಚ್ಚು ಪರಿಣಾಮಕಾರಿಯಾಗಿ ಹರಡುವ ಉದ್ದೇಶದಿಂದ ಸಮಾನತೆ ಮಂದಿರ ನಿರ್ಮಾಣಕ್ಕೆ ಮಹಾಸಭಾ ಬದ್ಧತೆಯಿಂದ ಮುಂದಾಗಿದೆ. ಈ ಯೋಜನೆ ದೇಶದ ಮಟ್ಟದಲ್ಲಿ ಅಪೂರ್ವವಾದ ಪ್ರಯತ್ನವಾಗಿದೆ.


ಈ ಕಾರ್ಯಕ್ರಮದ ಭಾಗವಾಗಿ, ಏಪ್ರಿಲ್ 19ರಂದು ಮಧ್ಯಾಹ್ನ 3 ಗಂಟೆಗೆ ಗದಗ–ಬೇಟಗೇರಿಯ ಬಸವೇಶ್ವರ ವೃತ್ತದಿಂದ ರಥಯಾತ್ರೆ ಆರಂಭವಾಗಲಿದೆ. ನಂತರ ನಗರದಾದ್ಯಂತ ಸಂಚರಿಸಿ, ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ, ಮುನ್ಸಿಪಲ್ ಕಾಲೇಜ್ ಮೈದಾನದಲ್ಲಿ ಬೃಹತ್ ಬಹಿರಂಗ ಸಭೆ ಜರುಗಲಿದೆ.

ಈ ಸಭೆಯಲ್ಲಿ ನೂರಾರು ಶರಣರು, ಸಂತರು, ಪೌರಕಾರ್ಮಿಕರು, ಶ್ರಮಿಕರು, ಬುದ್ಧಿಜೀವಿಗಳು, ಸಾಹಿತಿಗಳು, ಸ್ಮಶಾನ ಕಾವಲುಗಾರರು, ದೀನ–ದಲಿತರು ಹಾಗೂ ದಮನಿತರಿಗೆ ಮೆರವಣಿಗೆಯೊಂದಿಗೆ ಗೌರವಿಸಿ ಸನ್ಮಾನಿಸಲಾಗುವುದು.

ಸಮಾನತಾ ಮಂದಿರ ಪ್ರತಿಷ್ಠಾನದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸಾರ್ವಜನಿಕರನ್ನು ಕುಟುಂಬ ಸಮೇತರಾಗಿ ಆಗಮಿಸಿ ಕಾರ್ಯಕ್ರಮದ ಯಶಸ್ಸಿಗೆ ಕಾರಣರಾಗುವಂತೆ ಮಹಾಸಭಾದ ಸಂಸ್ಥಾಪಕ ರಾಜ್ಯಾಧ್ಯಕ್ಷ ಅನಿಲ ಮೆಣಸಿನಕಾಯಿ ವಿನಂತಿಸಿದ್ದಾರೆ.

## ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅವರು ಏಪ್ರಿಲ್ 15 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ವಿವರ ಈ ಕೆಳಗಿನಂತಿದೆ.

ಬೆಳಗ್ಗೆ 10 ಗಂಟೆಗೆ ಗದಗ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಡಿಡಿಪಿಐ ಅವರೊಂದಿಗೆ ಶಾಲಾ ಶೌಚಾಲಯ ಕುರಿತು ಸಭೆ ಜರುಗಿಸುವರು.

ಬೆಳಿಗ್ಗೆ 11 ಗಂಟೆಗೆ ಗದಗ ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಆವರಣದಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಗ್ಯಾರಂಟಿ ಪ್ರಾಧಿಕಾರದ ಕಚೇರಿಗಳ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ಎಂದು ಸಚಿವರ ಕಾರ್ಯಾಲಯ ಪ್ರಕಟಣೆ ತಿಳಿಸಿದೆ.

### ಡಾ. ಬಿ.ಆರ್. ಅಂಬೇಡ್ಕರ್, ಬಾಬು ಜಗಜೀವನರಾಂ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

# ಪ್ರಜಾಪ್ರಭುತ್ವ ಗಟ್ಟಿಗೊಳಿಸಿದ್ದು ಅಂಬೇಡ್ಕರರ ಸಂವಿಧಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ವ ಜನಾಂಗವನ್ನು ಸಮದೃಷ್ಟಿಯಿಂದ ನೋಡುವ ಸಂವಿಧಾನವನ್ನು ಡಾ. ಬಿ.ಆರ್. ಅಂಬೇಡ್ಕರ್ ರಚಿಸಿಕೊಟ್ಟರು. ಜೊತೆಗೆ ನಮ್ಮ ಕರ್ತವ್ಯಗಳನ್ನೂ ನಮಗೆ ಸೂಚಿಸಿದರು. ಅವರ ಆದರ್ಶಗಳ ಪಾಲನೆ ಅತ್ಯವಶ್ಯ. ಅದೇ ರೀತಿ ಬಾಬು ಜಗಜೀವನರಾಮ ಅವರು ಹೊಂದಿದ ಸಂಸ್ಕೃತ ಪಾಂಡಿತ್ಯ ಮೆಚ್ಚುವಂತದ್ದು ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಬಿ.ಆರ್. ಅಂಬೇಡ್ಕರ್ ಸಭಾಭವನದಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ಗದಗ–ಬೆಟಗೇರಿ ನಗರಸಭೆ ಹಾಗೂ ಗದಗ ಜಿಲ್ಲೆಯ ವಿವಿಧ ದಲಿತಪರ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಶಿಲ್ಪಿ, ಮಹಾನ್ ಮಾನವತಾವಾದಿ, ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 134ನೇ ಹಾಗೂ ಹಸಿರು ಕ್ರಾಂತಿಯ ಹರಿಕಾರ, ರಾಷ್ಟ್ರ ನಾಯಕ, ಭಾರತದ ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನರಾಂ ಅವರ 118ನೇ ಜಯಂತ್ಯುತ್ಸವದ ವೇದಿಕೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ರಾಜಕೀಯದಲ್ಲಿ ಅಸ್ಪೃಶ್ಯತೆ ಹೋಗಲಾಡಿಸಲಾಗಿದೆ. ಆದರೆ ಸಾಮಾಜಿಕ ಅಸ್ಪೃಶ್ಯತೆ ಇನ್ನೂ ಬೇರೂರಿದೆ. ಗ್ರಾಮಗಳಲ್ಲಿ ಈ ಪರಿಸ್ಥಿತಿ ಇನ್ನೂ ಇದೆ. ಸಾಮಾಜಿಕ ತೀವ್ರ ಸುಧಾರಣೆ ಪ್ರಸ್ತುತ ಅತ್ಯಂತ ಅವಶ್ಯವಿದೆ. ಸುಧಾರಣೆಗೆ ಹೋರಾಟ ಅವಶ್ಯವಿದೆ. ಆರ್ಥಿಕ ಸುಧಾರಣೆಗೂ ಪ್ರಾಮುಖ್ಯತೆ ನೀಡಬೇಕು ಎಂದರು.

ಹಿಂದುಳಿದ ಸಮುದಾಯಕ್ಕೆ ಸರ್ಕಾರ ಅನೇಕ ಸೌಲಭ್ಯ ನೀಡಿದೆ. ಶಿಕ್ಷಣ, ಪುಸ್ತಕ, ವಸತಿಗೆ ಶುಲ್ಕಗಳನ್ನು ನೀವು ನೀಡುವಂತಿಲ್ಲ. ವಿದ್ಯಾರ್ಥಿ ವೇತನ ಸರ್ಕಾರ ನೀಡುತ್ತದೆ. ಎಲ್ಲ ಸೌಲಭ್ಯ ಪಡೆದು ಮಕ್ಕಳನ್ನು ಆಸ್ತಿಯನ್ನಾಗಿಸಿಬೇಕು. ನಿಮ್ಮ ಬೆಳವಣಿಗೆ ನಿವೇ ಕಾರಣರಾಗಬೇಕು ಎಂದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು ಮಾತನಾಡಿ, ಅಂಬೇಡ್ಕರ್ ಮತ್ತು ಬಾಬು ಜಗಜೀವನರಾಂ ಅವರು ತಮ್ಮ ವೈಯಕ್ತಿಕ ಅಭಿವೃದ್ಧಿಗೆ ಬದುಕದೇ ಸಾಮಾಜಿಕ ಅಭಿವೃದ್ಧಿಗೆ ಬದುಕಿದವರು. ಈ ಇಬ್ಬರು ಮಹನೀಯರು ಲಕ್ಷ್ಮೀ ಪುತ್ರರಲ್ಲ, ಸರಸ್ವತಿ ಪುತ್ರರಾಗಿದ್ದರು ಎಂದರು.

ಅಂಬೇಡ್ಕರ್ ಅವರ ಸಾಧನೆ ಪರಿಗಣಿಸಿ ಅಂದಿನ ಪ್ರಧಾನಿ ವಾಜಪೇಯಿ ಅವರು ಮರಣೋತ್ತರ ಭಾರತರತ್ನ ಪ್ರಶಸ್ತಿ ನೀಡಿ ಗೌರವಿಸಿದರು. ಅದೇ ರೀತಿ ಅಂಬೇಡ್ಕರ್ ಅವರಿಗೆ ಸಂಬಂಧಿಸಿದ 5 ಕ್ಷೇತ್ರಗಳನ್ನು ಪ್ರಧಾನಿ ನರೇಂದ್ರ ಮೋದಿ ಅವರು ಪಂಚ ತೀರ್ಥ ಸ್ಥಳಗಳನ್ನಾಗಿ ಅಭಿವೃದ್ಧಿಪಡಿಸಿದರು ಎಂದು ವಿವರಿಸಿದರು.

▸▸ 3ನೇ ಪುಟಕ್ಕೆ



**ಭಾವಚಿತ್ರ ಮೆರವಣಿಗೆ**

ಡಾ. ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನರಾಂ ಅವರ ಭಾವಚಿತ್ರಗಳ ಮೆರಣಿಗೆಯು ಗದಗ ನಗರಸಭೆ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆಯೊಂದಿಗೆ ಪ್ರಾರಂಭಗೊಂಡು ಮಹಾತ್ಮ ಗಾಂಧಿ ಸರ್ಕಲ್, ಮಹೇಂದ್ರಕರ ಸರ್ಕಲ್, ಟಾಂಗಾ ಕೂಟ್, ಬಸವೇಶ್ವರ ಸರ್ಕಲ್, ಗುಜ್ಜರಬಸ್ತಿ, ಮುಳಗುಂದ ನಾಕಾ ಮಾರ್ಗವಾಗಿ ಡಾ. ಬಿ.ಆರ್. ಅಂಬೇಡ್ಕರ್ ಭವನ ತಲುಪಿತು.

ಭಾರತ ದೇಶದ ಸುತ್ತಮುತ್ತಲಿನ ದೇಶಗಳಲ್ಲಿ ಅಭದ್ರತೆ ಮೂಡಿದೆ. ಎಲ್ಲ ದೇಶಗಳು ಸಾಮಾಜಿಕ, ಆರ್ಥಿಕವಾಗಿ ದಿವಾಳಿಯಾಗಿ ಹೋಗಿವೆ. ಆದರೆ ಭಾರತ ದೇಶದಲ್ಲಿ ಡಾ. ಅಂಬೇಡ್ಕರ್ ರಚಿಸಿದ ಸಂವಿಧಾನ ಇರುವ ಕಾರಣ ಸುಭದ್ರವಾಗಿದೆ. ಇಂಧಿರಾ ಗಾಂಧಿ ಅವರ ಹತ್ಯೆ ನಂತರರೂ ಅಧಿಕಾರ ಹಸ್ತಾಂತರದಲ್ಲಿ ತೊಂದರೆ ಆಗಲಿಲ್ಲ. ಅದಕ್ಕೆ ಗಟ್ಟಿ ಪ್ರಜಾಪ್ರಭುತ್ವವೇ ಕಾರಣ.

– ಡಾ. ಎಚ್.ಕೆ. ಪಾಟೀಲ.
ಕಾನೂನು, ಪ್ರವಾಸೋದ್ಯಮ ಸಚಿವರು.

### ಡಾ. ಬಿ.ಆರ್. ಅಂಬೇಡ್ಕರರ 134ನೇ ಜಯಂತಿ ಕಾರ್ಯಕ್ರಮದಲ್ಲಿ ಸಚಿವ ಸಂತೋಷ ಲಾಡ್

# ಡಾ.ಅಂಬೇಡ್ಕರರ ಸಂದೇಶಗಳು ಸಮಾಜದ ದಾರಿದೀಪ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಡಾ. ಬಾಬಾಸಾಹೇಬ ಅಂಬೇಡ್ಕರರು ಮಹಾನ್ ಧೀಮಂತ ನಾಯಕರು. ಅವರ ಚಿಂತನೆಗಳು, ಕೊಡುಗೆಗಳು ವಿಶೇಷವಾಗಿ ಅವರು ರಚಿಸಿದ ಸಂವಿಧಾನ ರಾಷ್ಟ್ರಕ್ಕೆ ನೀಡಿದ ಬಹು ದೊಡ್ಡ ಕೊಡುಗೆಯಾಗಿದೆ. ಭೂಮಿಯ ಮೇಲೆ ಸೂರ್ಯ–ಚಂದ್ರರು ಇರುವವರೆಗೂ ಡಾ. ಅಂಬೇಡ್ಕರರ ಹೆಸರು ಶಾಶ್ವತವಾಗಿ ಇರುತ್ತದೆ ಎಂದು ಕಾರ್ಮಿಕ ಇಲಾಖೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದರು.

ಅವರು ಸೋಮವಾರ ಬೆಳಿಗ್ಗೆ ಕರ್ನಾಟಕ ವಿದ್ಯಾವರ್ಧಕ ಸಂಘದ ಡಾ. ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ಹುಬ್ಬಳ್ಳಿ–ಧಾರವಾಡ ಮಹಾನಗರಪಾಲಿಕೆ ಸಂಯುಕ್ತವಾಗಿ ಆಯೋಜಿಸಿದ್ದ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರರ 134ನೇ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಭಾರತಕ್ಕೆ ಮಹಾ ಮನವತಾವಾದಿ ಬಸವಣ್ಣ ಮತ್ತು ಭಾರತ ರತ್ನ ಡಾ. ಅಂಬೇಡ್ಕರರು ಎರಡು ಕಣ್ಣುಗಳಿದಂತೆ. ಅವರ ತತ್ವ, ಸಂದೇಶಗಳು ನಮ್ಮ ಸಮಾಜಕ್ಕೆ ಸದಾ ಕಾಲ ದಾರಿದೀಪಗಳಾಗಿವೆ. ಈ ಎರಡೂ ದಿವ್ಯ ಜ್ಯೋತಿಗಳು ಬೆಳಗಿದಷ್ಟು, ಭಾರತ ವಿಶ್ವದಲ್ಲಿ ಪ್ರಜ್ವಲಿಸಿ, ಪ್ರಕಾಶಿಸುತ್ತದೆ ಎಂದರು.

ಮಹಿಳೆಯರಿಗೆ ಸ್ವಾತಂತ್ರ್ಯ, ಸಮಾನತೆಯ ಹಕ್ಕುಗಳನ್ನು ನೀಡಿ, ಮಹಿಳಾ ಅಭಿವೃದ್ಧಿಗೆ ಡಾ.ಅಂಬೇಡ್ಕರರು ಅವಕಾಶ ಕಲ್ಪಿಸಿದ್ದಾರೆ. ಮಹಿಳೆಯರ ಪ್ರಗತಿ ಮೇಲೆ ದೇಶದ ಅಭಿವೃದ್ಧಿ ಅವಲಂಬಿಸಿದೆ ಎಂದು ಅವರು ನಂಬಿದ್ದರು. ಅದಕ್ಕಾಗಿ ಮಹಿಳೆಯರ ಹಕ್ಕು, ಸ್ವಾತಂತ್ರ್ಯಗಳಿಗೆ ವಿಶೇಷ ಆದ್ಯತೆ ನೀಡಿದ್ದಾರೆ ಎಂದು ವಿವರಿಸಿದರು.

ಮಹಾನಗರ ಪೊಲೀಸ್ ಆಯುಕ್ತ ಎನ್. ಶಶಿಕುಮಾರ ಮಾತನಾಡಿ, ದೇಶ ಉಳಿಯಲು ಸಂವಿಧಾನವೇ ಕಾರಣವಾಗಿದೆ. ಪ್ರತಿಯೊಬ್ಬ ಭಾರತೀಯನು ಭಾರತದ ಸಂವಿಧಾನವನ್ನು ಓದಬೇಕು. ವಿಶ್ವದ ಅತ್ಯುತ್ತಮ, ಶ್ರೇಷ್ಠ ಸಂವಿಧಾನವಾಗಿ ಗುರುತಿಸಿಕೊಂಡಿದೆ. ಸಂವಿಧಾನದ ಕಾನೂನು, ನಿಯಮಗಳನ್ನು ಎಲ್ಲರೂ ಪಾಲಿಸಬೇಕು ಎಂದು ಹೇಳಿದರು.

ವೇದಿಕೆಯಲ್ಲಿ ಮಾಜಿ ಸಂಸದ ಐ.ಜಿ. ಸನದಿ, ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ. ಗೋಪಾಲ ಬ್ಯಾಕೋಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಕೀರ ಸನದಿ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಜಿ.ಪಂ ಉಪ ಕಾರ್ಯದರ್ಶಿ ಬಿ.ಎಸ್. ಮೂಗನೂರಮಠ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಪಿ.ಶುಭ, ರಾಜು ಕೊಟ್ಯಾನವರ, ಕಲ್ಮೇಶ ಹಾದಿಮನಿ, ಎಂ.ಅರವಿಂದ, ಬೌದ್ಧ ಬಿಕ್ಕುಗಳು, ಜಿಲ್ಲಾ ಜಾಗೃತಿ ಸಮಿತಿ ಸದಸ್ಯರು, ಮುಖಂಡರು ಇದ್ದರು. ಅಥಣಿಯ ನ್ಯಾಯವಾದಿ ಡಾ. ಗೌತಮ ಬನಸೋಡೆ ಡಾ. ಅಂಬೇಡ್ಕರರ ಜೀವನ ಚರಿತ್ರೆ ಕುರಿತು ಪ್ರಧಾನ ಭಾಷಣ ಮಾಡಿದರು.



ಜಿಲ್ಲಾಧಿಕಾರಿ ದಿವ್ಯಪ್ರಭು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ, ಮಹಿಳಾ ಸ್ವಾತಂತ್ರ್ಯ ಪ್ರತಿಪಾದಿಸಿದ ಡಾ. ಬಿ.ಆರ್. ಅಂಬೇಡ್ಕರರು ಸಂವಿಧಾನ ರಚಿಸುವ ಮೂಲಕ ಮಹಿಳೆಯರಿಗೆ ಅಭಿವ್ಯಕ್ತಿ ಸ್ವಾತಂತ್ರ್ಯ, ಸ್ಥಾನಮಾನ ನೀಡಿದ್ದಾರೆ. ಅವರು ಸಮಾಜ ಸುಧಾರಣೆಗಿಂತ, ಪುನರ್ ನಿರ್ಮಾಣ ಮಾಡಿದರು. ಸದೃಢ ಸಮಾಜ ನಿರ್ಮಾಣಕ್ಕೆ ಅವರು ಸದಾಕಾಲ ಶ್ರಮಿಸಿದರು ಎಂದು ತಿಳಿಸಿದರು.

# ಡಾ. ಅಂಬೇಡ್ಕರರ ಆದರ್ಶಗಳೊಂದಿಗೆ ಸಮಾಜಮುಖಿ ಕಾರ್ಯ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಅಖಿಲ ಭಾರತ ಸಮಾನತೆ ಮಂದಿರ ಪ್ರತಿಷ್ಠಾಪನೆ ಮಹಾಸಭಾದ ರಾಜ್ಯಾಧ್ಯಕ್ಷ ಅನಿಲ್ ಪಿ.ಮೆಣಸಿನಕಾಯಿ ಅವರ ನಿವಾಸದಲ್ಲಿ ಡಾ. ಬಿ.ಆರ್. ಅಂಬೇಡ್ಕರರ ಜನ್ಮದಿನವನ್ನು ಆಚರಿಸಲಾಯಿತು.

ಡಾ. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ರಾಜ್ಯಾಧ್ಯಕ್ಷ ಅನಿಲ್ ಪಿ.ಮೆಣಸಿನಕಾಯಿ, ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಸಾಮಾಜಿಕ ನ್ಯಾಯ, ಸಮಾನತೆ ಮತ್ತು ಮಾನವೀಯ ಮೌಲ್ಯಗಳ ಕುರಿತ ಚಿಂತನೆಗಳನ್ನು ಹಂಚಿಕೊಂಡರಲ್ಲದೆ, ಅವರ ಆದರ್ಶಗಳನ್ನು ಅನುಸರಿಸಿ ಸಮಾಜಮುಖಿ ಕೆಲಸ ಮಾಡುವ ಸಂಕಲ್ಪ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ರುದ್ರಣ್ಣ ಗುಳಗುಳಿ, ಸಿದ್ದಣ್ಣ ಪಲ್ಲೇದ್, ಅಶೋಕ ಕರೂರು, ವಸಂತ ಪಡಗದ, ಶರಣಪ್ಪ ಚಿಂಚಳಿ, ಮುತ್ತು ಮುಸಿಗೇರಿ, ಶರಣಪ್ಪ ಕಮ್ಮಡೊಳ್ಳಿ, ರವಿ ಬಾಬು ಎಲಿಗಾರ, ಕೋರಿಶೆಟ್ಟರ ವಸ್ತ್ರದ, ಬಸು ಕುರಿ, ಉಡಚಪ್ಪ ಹಳ್ಳಿಕೇರಿ, ಪರಮೇಶ ನಾಯಕ, ವಿಜಯಲಕ್ಷ್ಮೀ ಮಾನ್ವಿ, ಚಮ್ಮಾಮ ಅಕ್ಕ, ಪದ್ಮಿನಿ, ಯೋಗೇಶ ಘೋಡಕೆ ಮುಂತಾದ ಗಣ್ಯರು ಉಪಸ್ಥಿತರಿದ್ದರು.

### ವಿಜೃಂಭಣೆಯಿಂದ ಜರುಗಿದ ಜಗದ್ಗುರು ತೋಂಟದಾರ್ಯ ಮಠದ ಮಹಾರಥೋತ್ಸವ

# ಐಕ್ಯತೆಯ ಸಂದೇಶ ಸಾರಿದ ಜಾತ್ರೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಾಡಿನಜಾತ್ರೆಗಳಿಗೆಮಾದರಿ ಜಾತ್ರೆಯೆನಿಸಿದ ಗದುಗಿನ ತೇ–ೂಂಟದಾರ್ಯ ಮಠದ ಮಹಾರಥೋತ್ಸವವು ಪೂಜ್ಯ ಜಗದ್ಗುರು ಡಾ. ತೋಂಟದ ಸಿದ್ಧರಾಮಮಹಾಸ್ವಾಮಿಗಳವರ ಸಾನ್ನಿಧ್ಯದಲ್ಲಿ ರವಿವಾರ ಸಂಜೆ 6.30ಕ್ಕೆ ಚಿತ್ತಾ ನಕ್ಷತ್ರದಲ್ಲಿ ಭಕ್ತ ಜನಸಾಗರದನಡುವೆವಿಜೃಂಭಣೆಯಿಂದ ನೆರವೇರಿತು.

ಅಡ್ಡಪಲ್ಲಕ್ಕಿಯಲ್ಲಿಬಸವಣ್ಣನವರ ಹಾಗೂ ಸಿದ್ಧಲಿಂಗೇಶ್ವರರ ಭಾವಚಿತ್ರಗಳನ್ನು, ವಚನದ ಕಟ್ಟುಗಳನ್ನು ಇಟ್ಟು ಮೆರವಣಿಗೆ ಮಾಡಲಾಯಿತು.ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಾವಿರಾರು ಭಕ್ತರೊಂದಿಗೆ ಮೆರವಣಿಗೆಯೊಂದಿಗೆನಡೆದು–ಕೊಂಡು ಬಂದರು. ಈ ಬಾರಿ ನೂತನ ತೇರು ಆಕರ್ಷಣೆಯ ಕೇಂದ್ರಬಿಂದುವಾಗಿತ್ತು.

ಸಂಡೂರವಿರಕ್ತಮಠದಪ್ರಭು ಮಹಾಸ್ವಾಮಿಗಳು, ಭೈರನಟ್ಟಿ ದೊರೆಸ್ವಾಮಿವಿರಕ್ತಮಠದಶಾಂತಲಿಂಗ ಮಹಾಸ್ವಾಮಿಗಳು, ಅಮೀನಡ ಗಚ್ಚಿನಮಠದ ಪೂಜ್ಯ ಶಂಕರ ರಾಜೇಂದ್ರ ಮಹಾಸ್ವಾಮಿಗಳು, ರಟಕಲ್ಲದರೇವಣಸಿದ್ಧಶಿವಾಚಾರ್ಯ ಮಹಾಸ್ವಾಮಿಗಳು, ರೋಜಾ ಹಿರೇಮಠದ ಕೆಂಚಬಸವ ಮಹಾಸ್ವಾಮಿಗಳು, ಕಮತಗಿಯ ಹೊಳೆಹುಚ್ಚೇಶ್ವರಸಂಸ್ಥಾನಮಠದ ಹುಚ್ಚೇಶ್ವರ ಮಹಾಸ್ವಾಮಿಗಳು, ಬಸವಬೆಳವಿಯ ಪೂಜ್ಯ ಶರಣಬಸವದೇವರು,ದೆಹಲಿಯ ಮಹಾಂತದೇವರು, ಬೇಲೂರ–ಬಾದಾಮಿಗುರುಬಸವೇಶ್ವರಮಠದ ಮಹಾಂತ ಮಹಾಸ್ವಾಮಿಗಳು, ಸಿಂದಗಿಯಪಾಠಶಾಲೆಯಶಿವಾನಂದ ಸ್ವಾಮಿಗಳು, ಯಶವಂತನಗರದ ಪೂಜ್ಯಗಂಗಾಧರಮಹಾಸ್ವಾಮಿಗಳು ಮುಂತಾದಹರಗುರುಚರಮೂರ್ತಿಗಳು ಭಾಗವಹಿಸಿದ್ದರು. 10ಕ್ಕೂ ಹೆಚ್ಚು ಸಾಂಸ್ಕೃತಿಕ ಕಲಾತಂಡಗಳು ಮೆರವಣಿಗೆಯುದ್ದಕ್ಕೂಪಾಲ್ಗೊಂಡವು.

ತೋಂಟದಾರ್ಯ ಜಾತ್ರಾ ಮಹೋತ್ಸವಸಮಿತಿಅಧ್ಯಕ್ಷರಾದ ಡಾ. ಧನೇಶ ದೇಸಾಯಿ, ಉಪಾಧ್ಯಕ್ಷರಾದ ಕರವೀರಯ್ಯ ಎಸ್.ಕೋರಿಮಠ, ಪ್ರೊ. ಡಿ.ಜಿ. ಜೋಗಣ್ಣವರ,ಶೈಲಾಕೋಡೆಕಲ್ಲ, ಕಾರ್ಯದರ್ಶಿಗಳಾದಶಿವಪ್ಪಕತ್ತಿ,ಸಹ ಕಾರ್ಯದರ್ಶಿಗಳಾದದಶರಥರಾಜ ಜಿ.ಕೊಳ್ಳಿ,ಸಿದ್ಧರಾಮಪ್ಪಗೊಜನೂರ, ಸಂಘಟನಾ ಕಾರ್ಯದರ್ಶಿ ನಾಗಪ್ಪಸವಡಿ,ಕೋಶಾಧ್ಯಕ್ಷರಾದ ವೀರಣ್ಣ ಗೊಡಚಿ, ರಾಜಶೇಖರ ಎಸ್.ಲಕ್ಕುಂಡಿ,ತೋಂಟದಾರ್ಯ ಮಠದ ಆಡಳಿತಾಧಿಕಾರಿ ಎಸ್.ಎಸ್.ಪಟ್ಟಣಶೆಟ್ಟಿ,ವ್ಯವಸ್ಥಾಪಕರಾದ ಎಂ.ಎಸ್. ಅಂಗಡಿ, ಅಮರೇಶ ಅಂಗಡಿ ಸೇರಿದಂತೆ ಬಸವದಳ, ಬಸವಕೇಂದ್ರ, ಲಿಂಗಾಯತ ಪ್ರಗತಿಶೀಲ ಸಂಘದ ಸದಸ್ಯರು ಹಾಗೂತೋಂಟದಾರ್ಯಮಠದ ಸದ್ಭಕ್ತರು ಪಾಲ್ಗೊಂಡಿದ್ದರು.



ರಥೋತ್ಸವಕ್ಕೂ ಮುನ್ನ ಪರಂಪರೆಯಂತೆ ಶ್ರೀ ವೀರನಾರಾಯಣ ರಸ್ತೆಯಲ್ಲಿರುವ ಎಸ್.ಎಸ್. ಕಳಸಾಪೂರಶೆಟ್ರ ನಿವಾಸದಿಂದ ಮೆರವಣಿಗೆಯಲ್ಲಿ ಕಾಲ್ನಡಿಗೆಯ ಮೂಲಕ ಡಾ. ತೋಂಟದ ಸಿದ್ಧರಾಮ ಶ್ರೀಗಳು ಶ್ರೀಮಠಕ್ಕೆ ಆಗಮಿಸಿದರು. ರಸ್ತೆಯುದ್ದಕ್ಕೂ ಹಿಂದೂ, ಮುಸ್ಲಿಂ ಸೇರಿದಂತೆ ಎಲ್ಲಾ ಸಮುದಾಯದವರು ಬಸವೇಶ್ವರ ಮತ್ತು ಸಿದ್ಧಲಿಂಗೇಶ್ವರ ವಚನಕಟ್ಟುಗಳಿಗೆ ಹಾಗೂ ಪೂಜ್ಯರಿಗೆ ಗೌರವ ಸಲ್ಲಿಸಿದರು. ಮೆರವಣಿಗೆಯಲ್ಲಿ ಪಾಲ್ಗೊಂಡ ಭಕ್ತರಿಗೆ ಮತ್ತು ಮೆರವಣಿಗೆ ತಂಡಗಳಿಗೆ ವರ್ತಕರು ಕುಡಿಯಲು ತಂಪುಪಾನಿಯಗಳನ್ನು ವಿತರಿಸಿದ್ದು ಐಕ್ಯತೆಯ ಸಂದೇಶವನ್ನು ಸಾರಿತು.

## ಸಂಪಾದಕೀಯ

# ಬಿಜೆಪಿ ನಾಯಕರು ಜಾತಿ ಜನಗಣತಿ ಒಪ್ಪಿಕೊಳ್ಳಲಿ

ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಜಯಂತಿಯ ಈ ಸುಸಂದರ್ಭದಲ್ಲಿ ರಾಜ್ಯ ಸರ್ಕಾರ ಜಾತಿ ಜನಗಣತಿ ವರದಿ ಜಾರಿಗೆ ಮುಂದಾಗಿದೆ. ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರು ನೀಡಿದ ವರದಿಯನ್ನ ಒಪ್ಪಿಕೊಂಡು, ವರದಿಯ ಪ್ರತಿಯನ್ನ ಜನಪ್ರತಿನಿಧಿಗಳಿಗೆ ನೀಡಿ ಇದೇ ಎಪ್ರಿಲ್ 17ರಂದು ನಿರ್ಧಾರ ಕೈಗೊಳ್ಳುವ ಬಗ್ಗೆ ದಿನಾಂಕ ನಿಗದಿಯಾಗಿದೆ.

ಕಾಂತರಾಜು ಆಯೋಗದ ವರದಿಯನ್ನು ಆಡಳಿತ ಪಕ್ಷ ಕಾಂಗ್ರೆಸ್ಸಿನ ಹಲವಾರು ನಾಯಕರು ಸೇರಿದಂತೆ ಪ್ರತಿಪಕ್ಷದವರು ವಿರೋಧ ವ್ಯಕ್ತಪಡಿಸಿದ್ದಾರೆ. ಜಾತಿ ಜನಗಣತಿ ಅವೈಜ್ಞಾನಿಕವಾಗಿದೆ. ನಿರ್ದಿಷ್ಟ ಸಮುದಾಯದ ಜನಸಂಖ್ಯೆಯನ್ನು ಕಡಿಮೆ ತೋರಿಸಲಾಗಿದೆ ಎನ್ನುವ ಆರೋಪಗಳನ್ನು ಪ್ರತಿಪಕ್ಷದ ನಾಯಕರು ಮಾಡಿದ್ದರು.

ಅದರಲ್ಲೂ ಸಚಿವ ಸಂಪುಟ ವರದಿ ಸ್ವೀಕರಿಸಿದ ನಂತರ ಈ ವರದಿಯನ್ನ ಯಾವ ಕಾರಣಕ್ಕೂ ಒಪ್ಪಲು ಸಾಧ್ಯವಿಲ್ಲ ಎಂದು ಪ್ರತಿಪಕ್ಷಗಳು ಟೀಕೆ ಮಾಡಿದವು. ಆದರೆ ಈಗ ಕೆಲ ಬಿಜೆಪಿ ನಾಯಕರು, ಜಾತಿ ಪಟ್ಟಿಯಲ್ಲಿ ಮುಸ್ಲಿಮರೆ ನಂಬರ್ ಒನ್ ಇರುವಾಗ ಅವರನ್ನು ಅಲ್ಪಸಂಖ್ಯಾತರು ಎಂದು ಪರಿಗಣಿಸಲು ಹೇಗೆ ಸಾಧ್ಯ ಎಂದು ಪ್ರಶ್ನಿಸುತ್ತಿದ್ದಾರೆ.

ಕಾಂತರಾಜು ಆಯೋಗದ ವರದಿ ವೈಜ್ಞಾನಿಕವಾಗಿದೆ ಎಂದು ಆರೋಪಿಸಿದವರು, ಇವತ್ತು ಮುಸ್ಲಿಮರ ಸಂಖ್ಯೆ ಹೆಚ್ಚಿದೆ ಎನ್ನುವುದನ್ನು ಒಪ್ಪಿಕೊಂಡು ಟೀಕೆ ಮಾಡುತ್ತಿರುವುದನ್ನು ನೋಡಿದರೆ, ಕಾಂತರಾಜು ಆಯೋಗದ ವರದಿಯಿಂದಲೂ ರಾಜಕಾರಣ ಮಾಡಬಹುದು ಎಂಬುದನ್ನು ಕಂಡುಕೊಂಡಿರುವುದು ಸ್ಪಷ್ಟವಾಗುತ್ತದೆ.

ಸದ್ಯಕ್ಕೆ ಕಾಂತರಾಜು ಆಯೋಗದ ಪ್ರಕಾರ ಮುಸ್ಲಿಮರೇ ನಂಬರ್ ಒನ್ ಇರುವುದನ್ನು ಒಪ್ಪಿಕೊಳ್ಳುವದಾದರೆ, ಇನ್ನುಳಿದ ಜಾತಿಗಳ ಜನಗಣತಿಯು ಸರಿಯಾಗಿದೆ ಎಂದು ಒಪ್ಪಿಕೊಳ್ಳಬೇಕಾಗುತ್ತದೆ. ಆಯೋಗ ನಡೆಸಿದ ವರದಿ ವೈಜ್ಞಾನಿಕವಾಗಿದೆ ಎಂದು ಬಿಜೆಪಿ ನಾಯಕರು ಕ್ಷಮಾಪಣೆಯನ್ನು ಕೇಳಬೇಕಾಗುತ್ತದೆ.

ಆದರೆ ಸಿಟಿ ರವಿ ಅಂತಹ ಬಿಜೆಪಿಯ ನಾಯಕರಿಗೆ, ಕೇವಲ ಅಲ್ಪಸಂಖ್ಯಾತರನ್ನ ಗುರಿಯಾಗಿಟ್ಟುಕೊಂಡು ಮಾತನಾಡುವ ಖಯಾಲಿ ಬಳಸಿಕೊಂಡಿದ್ದಾರೆ. ಅಂಥವರಿಂದ ಕಾಂತರಾಜು ಆಯೋಗದ ವರದಿಯ ಬಗ್ಗೆ ಪ್ರಾಮಾಣಿಕ ವಿಶ್ಲೇಷಣೆ ನಿರೀಕ್ಷಿಸುವುದು ಕಷ್ಟ.

ಕವನ

## ಕನ್ನಡದ ಜಗದ್ಗುರು



ಕನ್ನಡಕ್ಕೊಬ್ಬರೇ ಕನ್ನಡದ ಕಣ್ವ ಬಿ.ಎಂ.ಶ್ರೀ
ಒಬ್ಬರೇ ಕನ್ನಡದ ಜಗದ್ಗುರು ತೋಂಟದ ಶ್ರೀ

ಕಲೆ ಸಾಹಿತ್ಯ ಸಂಸ್ಕೃತಿ ಉತ್ತಿ ಬಿತ್ತಿ ಬೆಳೆದರು
ವಚನ ಪಲ್ಲಕ್ಕಿ ಮೆರವಣಿಗೆ ಮಾಡಿ ಹೆಸರಾದರು
ಮಠ ಮಸೀದಿ ಚರ್ಚುಗಳನು ಒಂದು ಮಾಡಿದವರು
ವಿಶ್ವಭಾತೃತ್ವ ಜಗಕೆ ಸಾರಿ ಭಾವೈಕ್ಯತೆ ತಂದವರು

ತ್ರಿವಿಧ ದಾಸೋಹಿ ಚಳುವಳಿಗಳ ದಂಡನಾಯಕ
ಕಂದಾಚಾರ ಮೂಢನಂಬಿಕೆಗಳ ಸಂಹಾರಕ
ಸರ್ವ ಸಮಾನತೆಯ ಸಮಾಜ ಸುಧಾರಕ
ಜಗಕ್ಕೆಲ್ಲ ಮಾತೃ ಹೃದಯದ ದ್ಯೋತಕ

ನ್ಯಾಯ ನಿಷ್ಠುರಿ ಹೊಂದಾಣಿಕೆ ಬಯಸದ ಸಂತ
ಶಿವಾನುಭವಗಳನು ಮುಂಚೂಣಿಗೆ ತಂದ ದೂತ
ವೈಚಾರಿಕ, ವೈಜ್ಞಾನಿಕ ಚಿಂತನೆಯ ಬಸವ ಸಂಜಾತ
ಸದಾ ಕಾಲ ಬಯಸಿದಿರಿ ನೀವು ಬಡ ಭಕ್ತರ ಹಿತ

ಮರಣವೇ ಮಹಾನವಮಿ ಎಂದು ಅಂದೇ ಅಸ್ತಂಗತ
ಅನಾಥರಾದೆವು ಅಂದಿನಿಂದ ತಂದೆ ಬಸವ ಪ್ರಣೀತ
ಮಠದ ಭಕ್ತರಾಗಿರುವರು ಇಂದಿಗೂ ದಿಗ್ಭ್ರಾಂತ
ಮಾಡಿ ಹೋದಿರಿ ನೀವು ಮಠವ ಜಾತ್ಯಾತೀತ

– ರವೀಂದ್ರ ಆರ್.ಪಟ್ಟಣ.
ಮುಳಗುಂದ.

**ಡಾ. ಅಂಬೇಡ್ಕರ್, ಡಾ. ಬಾಬು ಜಗಜೀವನರಾಮ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಸಿ.ಪಿ.ಐ ಸಿದ್ರಾಮೇಶ್ವರ ಗಡಾದ ಅಭಿಮತ**

# ಅಂಬೇಡ್ಕರರ ಜೀವನವೇ ಒಂದು ಹೋರಾಟ

**■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಅಶ್ಪಸ್ಯತೆ, ಅಸಮಾನತೆಯ ವಿರುದ್ಧ ಹೋರಾಡಿ ಸಂವಿಧಾನ ರಚಿಸುವ ಮೂಲಕ ಈ ದೇಶದ ಕೊನೆಯ ವ್ಯಕ್ತಿಗೂ ಸಹ ನ್ಯಾಯವನ್ನು ಒದಗಿಸಿದ ಮಹಾ ಮಾನವತಾವಾದಿ ಡಾ. ಬಿ.ಆರ್. ಅಂಬೇಡ್ಕರರ ತತ್ವ-ಸಿದ್ಧಾಂತ ಮತ್ತು ಸಂವಿಧಾನದ ಆಶಯಗಳನ್ನು ಅಳವಡಿಸಿಕೊಂಡಾಗ ಮಾತ್ರ ಅಂಬೇಡ್ಕರರ ಜಯಂತ್ಯುತ್ಸವಕ್ಕೆ ಅರ್ಥ ಬರುತ್ತದೆ ಎಂದು ಗದಗ ಗ್ರಾಮೀಣ ಪೋಲಿಸ್ ಠಾಣೆಯ ಸಿ.ಪಿ.ಐ ಸಿದ್ರಾಮೇಶ್ವರ ಗಡಾದ ಅಭಿಪ್ರಾಯಪಟ್ಟರು.

ಇಲ್ಲಿಯ ಗ್ರಾಮ ಪಂಚಾಯತಿ ವತಿಯಿಂದ ಹಮ್ಮಿಕೊಂಡಿದ್ದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರ 134ನೇ ಹಾಗೂ ಉಪಪ್ರಧಾನಿ ಡಾ. ಬಾಬು ಜಗಜೀವನರಾಮರ 118ನೇ ಜಯಂತ್ಯುತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅಂಬೇಡ್ಕರರ ಜೀವನವೇ ಒಂದು ಹೋರಾಟವಾಗಿತ್ತು. ಅವಮಾನ, ಬಡತನ, ಕಷ್ಟಗಳು ಅವರನ್ನು ಹೋರಾಟದ ಮನೋಭಾವನೆ ಮತ್ತು ಶಿಕ್ಷಣದ ಉತ್ತುಂಗಕ್ಕೆ ಏರಲು ಪ್ರೇರೇಪಣೆಯಾಯಿತು. ಹಲವಾರು ದೇಶಗಳ ಸಂವಿಧಾನವನ್ನು ಅಧ್ಯಯನ ಮಾಡಿ ಒಂದು ಮೌಲ್ಯಯುತ ಸಂವಿಧಾನ ರಚನೆ ಮಾಡಿದ್ದರಿಂದ ಇಂದು ಕೆಳವರ್ಗದ ಸಮುದಾಯವು ಎಲ್ಲ ಕ್ಷೇತ್ರಗಳಲ್ಲಿ ಸಮಾನತೆಯಿಂದ ಇರಲು ಸಾಧ್ಯವಾಗಿದೆ ಎಂದರು.

ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ ಮಾತನಾಡಿ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ ಹಾಗೂ ಹಸಿರು ಕ್ರಾಂತಿಯ ಹರಿಕಾರ ಬಾಬು ಜಗಜೀವನರಾಮರ ಜಯಂತಿಯನ್ನು ಗ್ರಾಮ ಪಂಚಾಯಿತಿ ವತಿಯಿಂದ ಆಚರಿಸುತ್ತಿರುವುದು ಸಂತಸ ತಂದಿದೆ ಎಂದರು.

ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಈ ದೇಶದಲ್ಲಿ ಅಂಬೇಡ್ಕರರು ಜನಿಸದೇ ಇದ್ದಿದ್ದರೆ ಇಂದು ಜಾತೀಯತೆ, ಅಶಸ್ಪೃತೆ, ಅಸಮಾನತೆ ತಾಂಡವವಾಡುತ್ತಿತ್ತು. ಸಂವಿಧಾನದ ಅತ್ಯುತ್ತಮ ಕಾನೂನುಗಳಿಂದ ನಮಗೆಲ್ಲರಿಗೂ ಸಮಾನವಾದ ಅವಕಾಶಗಳು ದೊರೆಯುತ್ತಿವೆ. ಆದರೆ ಇಂದಿಗೂ ಸಹ ಜಾತಿಯ ಗಲಭೆಗಳಿಂದ ಕೊಲೆ, ಸುಲಿಗೆಗಳು ನಡೆಯುತ್ತಿರುವುದು ವಿಷಾದನೀಯ ಎಂದರು.

ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಜಿ.ಪಂ ಮಾಜಿ ಸದಸ್ಯ ಎಸ್.ಬಿ. ಕಲಕೇರಿ, ತಾ.ಪಂ ಮಾಜಿ ಅಧ್ಯಕ್ಷ ಎಂ.ಎನ್. ಉಮಚಗಿ, ತಾ.ಪಂ ಮಾಜಿ ಸದಸ್ಯ ಮಹೇಶ ಮುಸ್ಕಿನಭಾವಿ, ಧುರೀಣ ಎನ್.ಐ. ಕಿರಟಗೇರಿ, ಎಸ್.ಡಿ.ಎಂ.ಸಿ ಅಧ್ಯಕ್ಷೆ ನಾಗಮ್ಮ ಹಾಲಿನವರ, ಗ್ರಾ.ಪಂ ಸದಸ್ಯರು ವೇದಿಕೆಯಲ್ಲಿದ್ದರು.

ನೀಲಮ್ಮ ಬರದ್ವಾಡ ಸಂವಿಧಾನದ ಪೂರ್ವ ಪೀಠಿಕೆಯನ್ನು ಓದಿದರು. ಬಸವರಾಜ ಹಡಗಲಿ ಕ್ರಾಂತಿಗೀತೆ ಹಾಡಿದರು. ಪಿ.ಡಿ.ಒ ಅಮೀರನಾಯಕ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯದರ್ಶಿ ಪ್ರದೀಪ ಆಲೂರ ಹಾಗೂ ಎಸ್.ಡಿ.ಎ.ಎ ತುಕಾರಾಮ ಹುಲಗಣ್ಣವರ ಸ್ವಾಗತಿಸಿದರು. ಶಿಕ್ಷಕ ವೈ.ವೈ. ಬೆಟಗೇರಿ ನಿರೂಪಿಸಿದರು. ಶಿಕ್ಷಕ ಎಸ್.ಎಚ್. ಶೆಟ್ಟೆನಾಯ್ಕರ ವಂದಿಸಿದರು.



ಕೆ.ಜಿ.ಎಸ್ ಶಾಲೆಯ ಶಿಕ್ಷಕಿ ಸುವರ್ಣ ರೆಡ್ಡಿ ಅಂಬೇಡ್ಕರರ ಕುರಿತು ಉಪನ್ಯಾಸ ನೀಡಿದರು. ಗದಗ ಗ್ರಾಮೀಣ ಸಿ.ಪಿ.ಐ ಸಿದ್ರಾಮೇಶ್ವರ ಗಡಾದ, ಪಿ.ಎಸ್.ಐ ಲಾಲಸಾಬ ಜೂಲಿಕಟ್ಟಿ, ಪೊಲೀಸ್ ಪೇದೆಗಳಾದ ವಿ.ಎಚ್. ಗುಡ್ಲಾನೂರು, ಸಿದ್ದಾರೆಡ್ಡಿ ಕಪ್ಪತ್ತನವರ, ಪ್ರವೀಣ ಕಲ್ಲೂರ, ಆನಂದಸಿಂಗ್ ದೊಡ್ಡಮನಿ, ತಾ.ಪಂ ಇ.ಓ ಮಲ್ಲಯ್ಯ ಕೊರವನವರ, ವೈದ್ಯಾಧಿಕಾರಿ ಅಮೃತ ಹರಿದಾಸ, ಜಾನಪದ ಅಕಾಡೆಮಿ ಪುರಸ್ಕೃತ ಬಸವರಾಜ ಹಡಗಲಿ, ದ್ವಿತೀಯ ಪಿ.ಯು.ಸಿಯಲ್ಲಿ ಸಾಧನೆಗೈದ ಬಿ.ಚ್. ಪಾಟೀಲ, ಸಿದ್ದಪ್ಪ ಓಗಿ, ಮಂಜುನಾಥ ಬನ್ನಿ, ಶಂಭು ಯಳವತ್ತಿ, ಎಂ.ಕೆ.ಬಿ.ಎಸ್ ಶಾಲೆಯ ಉತ್ತಮ ಭಾಷಣಕಾರ ವಿದ್ಯಾರ್ಥಿ ಸುಭಾಸಗೌಡ ಸೊಟಕನಹಾಳ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

## ಡಾ. ಅಂಬೇಡ್ಕರ್ ಮಹಾನ್ ಮಾನವತಾವಾದಿ



**■ ವಿಜಯಸಾಕ್ಷಿ ಸುದ್ದಿ, ಡಂಬಳ**

ಡಾ. ಅಂಬೇಡ್ಕರರು ರಚಿಸಿದ ಸಂವಿಧಾನದ ಆಶಯದಂತೆ ಇಂದು ಭಾರತ ಮುನ್ನಡೆಯುತ್ತಿದೆ. ಅಂಬೇಡ್ಕರ್ ಅವರ ಬಗ್ಗೆ ಪ್ರತಿಯೊಬ್ಬರೂ ಅಭ್ಯಾಸ ಮಾಡಬೇಕು. ರಾಷ್ಟ್ರದ ಅಭಿವೃದ್ಧಿಗೆ ಯುವಶಕ್ತಿ ಮುಂದಾಗಬೇಕೆಂದು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶಿವಲೀಲಾ ದೇವಪ್ಪ ಬಂಡಿಹಾಳ ಹೇಳಿದರು.

ಡಂಬಳ ಗ್ರಾಮ ಪಂಚಾಯಿತಿಯಲ್ಲಿ ಅಂಬೇಡ್ಕರ್ ಜಯಂತಿ ಪ್ರಯುಕ್ತ ಅವರ ಭಾವಚಿತ್ರಕ್ಕೆ ಪುಷ್ಪ ಸಲ್ಲಿಸಿ ಮಾತನಾಡಿದ ಅವರು, ಬಸವಣ್ಣನವರ ನಂತರ ಡಾ. ಬಿ.ಆರ್. ಅಂಬೇಡ್ಕರ್ ಸಮಾನತೆಗಾಗಿ ಶ್ರಮಿಸಿದರು. ಭಾರತಕ್ಕೆ ಸುಭದ್ರವಾದ ಸಂವಿಧಾನ ನೀಡಿದರು. ಭಾರತದ ಸಂವಿಧಾನಕ್ಕೆ ಇಡೀ ವಿಶ್ವದಲ್ಲಿ ತನ್ನದೇ ಆದ ಗೌರವ ಇದೆ. ಭಾರತದ ಪ್ರಜಾಪ್ರಭುತ್ವದ ವ್ಯವಸ್ಥೆಯನ್ನು ಸದೃಢಗೊಳಿಸಲು ಅಂಬೇಡ್ಕರ್ ಕೊಡುಗೆ ನೀಡಿದರು. ಅವರನ್ನು ಎಷ್ಟು ಸ್ಮರಿಸಿದರು ಕಡಿಮೆಯೇ ಎಂದು ಹೇಳಿದರು.

ಗ್ರಾ.ಪಂ ಸದಸ್ಯ ಮರಿಯಪ್ಪ ಸಿದ್ಧಣ್ಣವರ ಮಾತನಾಡಿ, ಅಂಬೇಡ್ಕರರ ಬದುಕು, ತತ್ವ, ಆದರ್ಶಗಳು ಭಾರತೀಯರ ಪಾಲಿಗೆ ಸಂಜೀವಿನಿಯಾಗಿದೆ. ಸಮಾನತೆ, ಪ್ರಗತಿಯ ಕನಸು ಕಂಡ ಮೇರು ನಾಯಕ ಡಾ. ಅಂಬೇಡ್ಕರ್. ಬಾಬಾ ಸಾಹೇಬರ ಚಿಂತನೆಗಳು ಇಂದಿಗೂ ಯುವಜನತೆಗೆ ಸ್ಫೂರ್ತಿ ನೀಡುತ್ತಲೇ ಇದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪಿಡಿಓ ಲತಾ ಮಾನೆ, ಗ್ರಾ.ಪಂ ಸದಸ್ಯ ಶಂಕರಪ್ಪ ಗಡಗಿ, ಬಸುರಾಜ ಬಂಡಿ, ಯಲ್ಲಮ್ಮ ತಳವಾರ, ಜ್ಯೋತಿ ಬಾವಿ, ಯಲ್ಲಪ್ಪ ಹಾದಿಮನಿ, ಜಾಂದಮುನ್ನಿ ನೂರಬಾಷಾ, ಮೈಲಾಪ್ಪ ಹರಿಜನ, ಸಣ್ಣನಿಂಗಪ್ಪ ಗೋವಿನಕೊಪ್ಪ, ರಮೇಶ ಮುರಾರಿ, ದೇವಪ್ಪ ತಳಗೇರಿ, ಫರಾನಾಬಾನು ಸೋಟಕ್ಕನಾಳ, ಸರಳಾ ಯಾವಗಲ್ಲ, ಸಿದ್ದಮ್ಮ ಚಲವಾದಿ, ಪ್ರೇಮಾ ಬೇವಿನಮರದ, ಲಕ್ಷ್ಮವ್ವ ಹರಿಜನ, ನಾಗಯ್ಯ ಕರವೀರಮಠ ಮುಂತಾದವರಿದ್ದರು.

## ಸೋಮವಾರದಿಂದ ಶುಕ್ರವಾರದವರೆಗೆ ನಿಮ್ಮನೆಗೆ 'ಮುದ್ದುಸೊಸೆ'ಯ ಆಗಮನ

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಸೊಸೆ ಮುದ್ದಾಗಿರಬೇಕು ಎಂಬ ಕನಸು, ಬಯಕೆ ಯಾರಿಗಿಲ್ಲ ಹೇಳಿ. ಈಗ ಅಂಥ 'ಮುದ್ದು ಸೊಸೆ' ಸೋಮವಾರದಿಂದ ನಿಮ್ಮ ಮನೆಗೆ ಆಗಮಿಸಲಿದ್ದಾಳೆ!

ಮಗ ಇನ್ನೂ ಚಿಕ್ಕವನಿದ್ದಾನೆ, ಹೇಗೆ ಸೊಸೆ ಮನೆಗೆ ಬರಲು ಸಾಧ್ಯ? ಎಂದು ಗಾಬರಿಯಾಗಬೇಡಿ! ನಾವು ಹೇಳುತ್ತಿರುವುದು ಕಲರ್ಸ್ ಕನ್ನಡ ವಾಹಿನಿಯಲ್ಲಿ ಬರಲಿರುವ ಮುದ್ದು ಸೊಸೆಯ ಕಥೆ.

ಕಲರ್ಸ್ ಕನ್ನಡ ವಾಹಿನಿ ಸದಾ ಪ್ರೇಕ್ಷಕರ ಹೃದಯವನ್ನು ಮುಟ್ಟುವ, ಮನಮಿಡಿಯುವ ಧಾರಾವಾಹಿಗಳನ್ನು ನೀಡುವ ಮೂಲಕ ಜನಪ್ರಿಯವಾಗಿದೆ. ಇದೀಗ, ಮತ್ತೊಂದು ಹೃದಯಸ್ಪರ್ಶಿ ಕತೆ 'ಮುದ್ದು ಸೊಸೆ'ಯನ್ನು ಪ್ರೇಕ್ಷಕರಿಗೆ ತಲುಪಿಸುತ್ತಿದೆ. ತ್ರಿವಿಕ್ರಮ್ ನಾಯಕರಾಗಿ ಪ್ರತಿಮಾ ಠಾಕುರ್ ನಾಯಕಿಯಾಗಿರುವ, ಮುನಿ ಮತ್ತು ಹರಿಣಿ ಶ್ರೀಕಾಂತ್ ತಾರಾಗಣದ ಈ ಬಹುನಿರೀಕ್ಷಿತ ಧಾರಾವಾಹಿ ಏಪ್ರಿಲ್ 14ರಿಂದ ಸೋಮವಾರದಿಂದ ಶುಕ್ರವಾರ ರಾತ್ರಿ 7:30ಕ್ಕೆ ನಿಮ್ಮ ಕಲರ್ಸ್ ಕನ್ನಡದಲ್ಲಿ ಪ್ರಸಾರಗೊಳ್ಳಲಿದೆ.




'ಎಸ್ವೆಲ್ಲಾ ಸ್ಟೋರೀಸ್ ' ನಿರ್ಮಿಸುತ್ತಿರುವ 'ಮುದ್ದು ಸೊಸೆ' ಧಾರಾವಾಹಿಯು ಬೊಗಸೆಗಣ್ಣಿನ ಬಯಕೆಯ ವಿದ್ಯಾಳ ಕತೆಯನ್ನು ಹೇಳುತ್ತದೆ. ಸಕ್ಕರೆ ನಗರ ಮಂಡ್ಯದಲ್ಲಿ ಚಿತ್ರೀಕರಿಸಲಾಗಿರುವ ಈ ಧಾರಾವಾಹಿ, ಭಾರತದ ಗ್ರಾಮೀಣ ಕುಟುಂಬಗಳ ಸಂಸ್ಕೃತಿ ಮತ್ತು ಸಾಮಾಜಿಕ ಮೌಲ್ಯಗಳನ್ನು ಸೂಕ್ಷ್ಮವಾಗಿ ಚಿತ್ರಿಸುತ್ತದೆ. ಈ ಎಲ್ಲ ಚೌಕಟ್ಟಿನಲ್ಲಿ ಒಬ್ಬ ಮಹಿಳೆಯ ರೂಪಾಂತರವನ್ನು ಜನರಿಗೆ ಮನಮುಟ್ಟುವಂತೆ ಹೇಳುತ್ತದೆ. ಧಾರಾವಾಹಿಯು ಪ್ರೀತಿ, ಗೌರವ ಮತ್ತು ಕುಟುಂಬ ಮೌಲ್ಯಗಳ ನಡುವಿನ ಸಮತೋಲನವನ್ನು ಪ್ರತಿಬಿಂಬಿಸುತ್ತ ಎಲ್ಲ ವಯಸ್ಸಿನವರಿಗೂ ಇಷ್ಟವಾಗುತ್ತ ಹೋಗುತ್ತದೆ.

ವೈದ್ಯೆ ಆಗಬೇಕೆಂಬ ಕನಸನ್ನು ಕಾಣುತ್ತಿರುವ ಪ್ರತಿಭಾವಂತ ವಿದಾರ್ಥಿನಿ ವಿದ್ಯಾ; ಸ್ಕೂಲ್ ಬೆಂಚಿಂದ ಹಸೆಮಣೆ ಏರುವ ವಿದ್ಯಾಳ ಬದುಕಿನ ಕತೆಯನ್ನು ಹೇಳುತ್ತದೆ. ಉಳಿದ ಕಥೆ, ವಿವರಗಳನ್ನು ಸೋಮವಾರದಿಂದ ಕಲರ್ಸ್ ಕನ್ನಡದಲ್ಲಿ ತಪ್ಪದೇ ನೋಡಿ 'ಮುದ್ದು ಸೊಸೆ'.

**ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯಿಂದ ಮಹಿಳೆಯರಿಗಾಗಿ ಜಿಲ್ಲಾ ಮಟ್ಟದ ಸ್ಪರ್ಧೆ**

# ಮಹಿಳೆಯ ಬಲವರ್ಧನೆಗೆ ಕ್ರೀಡೆಗಳು ಸಹಕಾರಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಮಹಿಳೆ ದಿನನಿತ್ಯ ಮನೆಗೆಲಸ, ಹಿರಿಯರ ಆರೈಕೆ, ಮಕ್ಕಳ ಶಿಕ್ಷಣ, ಮನೆ ಜವಾಬ್ದಾರಿ ಇನ್ನಿತರೆ ಹಲವಾರು ಕಾರ್ಯಗಳನ್ನು ನಿರ್ವಹಿಸಬೇಕಾಗುತ್ತದೆ. ಈ ಎಲ್ಲ ಕಾರ್ಯಗಳನ್ನು ನಿರ್ವಹಿಸಲು ಮಹಿಳೆ ದೈಹಿಕ ಮತ್ತು ಮಾನಸಿಕವಾಗಿ ಸದೃಢಳಾಗಿರಬೇಕು. ಅನೇಕ ಕೆಲಸ-ಕಾರ್ಯಗಳ ಒತ್ತಡದಿಂದ ಮಹಿಳೆಯ ಮನೋದೈಹಿಕ ಬಲ ಕುಗ್ಗುತ್ತದೆ. ಈ ಬಲಸಂವರ್ಧನೆಗಾಗಿ ಮಹಿಳೆ ವಿವಿಧ ಕ್ರೀಡೆಗಳ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳುವುದು ಶ್ರೇಯಸ್ಕರವಾಗಿದೆ. ಕ್ರೀಡೆಗಳಿಂದ ದೈಹಿಕ, ಮಾನಸಿಕ ಸಾಮರ್ಥ್ಯ ಹೆಚ್ಚುತ್ತದೆ. ಹೀಗಾಗಿ ಮಹಿಳೆಯ ಮನೋದೈಹಿಕ ಬಲವರ್ಧನೆಗೆ ಕ್ರೀಡಾ ಸ್ಪರ್ಧೆಗಳು ಸಹಕಾರಿಯಾಗಿವೆ ಎಂದು ಕ್ರೀಡಾಭಿಮಾನಿ ಜಯಶ್ರೀ ವಸ್ತ್ರದ ತಿಳಿಸಿದರು. ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ 16ನೇ ವಾರ್ಷಿಕೋತ್ಸವದ ಅಂಗವಾಗಿ ಮಹಿಳೆಯರಿಗಾಗಿ ಹಮ್ಮಿಕೊಂಡಿದ್ದ ಗದಗ ಜಿಲ್ಲಾ ಮಟ್ಟದ ವಿವಿಧ ಸ್ಪರ್ಧೆಗಳ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಸ್ಪರ್ಧೆಗಳ ಉದ್ಘಾಟನೆಯನ್ನು ಸ್ಪರ್ಧಿಗಳೆಲ್ಲರ ಪರವಾಗಿ ತನ್ವಿ ಜಾಲಿಹಾಳ ಮತ್ತು ಜಯಶ್ರೀ ಡಾವಣಗೇರಿ ನೆರವೇರಿಸಿದರು. ಶೈಲಜಾ ಸಜ್ಜನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಬಹುಮಾನ ವಿತರಣೆಯನ್ನು ಸಂಜೆ ನಡೆದ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ನೆರವೇರಿಸಲಾಯಿತು. ಸ್ಪರ್ಧೆಗಳಲ್ಲಿ ಭಾಗವಹಿಸಿದ ಮತ್ತು ವಿಜೇತರಾದ ಸ್ಪರ್ಧಿಗಳಿಗೆಲ್ಲರಿಗೂ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಸದಸ್ಯರೆಲ್ಲರ ಪರವಾಗಿ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ ಅಭಿನಂದನೆಗಳನ್ನು ತಿಳಿಸಿದರು.




ಮಹಿಳೆಯರಿಗಾಗಿ ನಡೆಸಿದ ಗದಗ ಜಿಲ್ಲಾ ಮಟ್ಟದ ವಿವಿಧ ಸ್ಪರ್ಧೆಗಳ ಫಲಿತಾಂಶ.

ಯೋಗಾಸನ ಸ್ಪರ್ಧೆ 8–20 ವರ್ಷದ ಬಾಲಕಿಯರ ವಿಭಾಗ: ಪ್ರಥಮ–ಲಕ್ಷ್ಮೀ ಬಸರಿ, ದ್ವಿತೀಯ– ಶ್ರೀದೇವಿ ಬೂದಗಣ್ಣವರ, ತೃತೀಯ– ರಷಿದಾ ಮುಂದಿನಮನಿ, ಪೂರ್ಣಿಮಾ ಕಟಿಗ್ಗಾರ.

20–40 ವರ್ಷದ ಯುವತಿಯರ ವಿಭಾಗ: ಪ್ರಥಮ– ಸಂಗೀತಾ ಮಡಿವಾಳರ, ದ್ವಿತೀಯ– ಸುಧಾ ಪಾಟೀಲ, ತೃತೀಯ– ವೀಣಾ ಮಾಲಿಪಾಟೀಲ.

40 ವರ್ಷ ಮಹಿಳೆಯರ ವಿಭಾಗ: ಪ್ರಥಮ– ಶಾರದಾ ಕಾತರಕಿ, ದ್ವಿತೀಯ– ಜಯಶ್ರೀ ಡಾವಣಗೇರಿ, ತೃತೀಯ– ಗೌರಿ ಜಿರಂಕಳಿ.

ಭಾಷಾ ಕೌಶಲ್ಯ ಸ್ಪರ್ಧೆ: ಪ್ರಥಮ– ದಿವ್ಯಾ ಸಾಳೇರ, ದ್ವಿತೀಯ– ಜಯಶ್ರೀ ವಸ್ತ್ರದ, ತೃತೀಯ– ಲಕ್ಷ್ಮೀ ಬಸರಿ.

ಯೋಗಾಸನ ಬರಹ ಸ್ಪರ್ಧೆ: ಪ್ರಥಮ– ಶ್ರಾವಣಿ ಗುಡದೂರ, ದ್ವಿತೀಯ– ಲಕ್ಷ್ಮೀ ಬಸರಿ, ತೃತೀಯ– ಸಂಗೀತಾ ನಾಕೋಡ.

## ಉತ್ತಮ ಶಿಕ್ಷಕನಿಂದ ಉತ್ತಮ ಸಮಾಜ



**■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿನ ಮಾಗಡಿ ಗ್ರಾಮದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಹಿರಿಯ ಪ್ರಾಥಮಿಕ ಶಾಲೆ, ಸರಕಾರಿ ಹೆಣ್ಣು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆಯ 1993ರ ಎಸ್‌ಎಸ್‌ಎಲ್‌ಸಿ ಬ್ಯಾಚ್‌ನ ವಿದ್ಯಾರ್ಥಿಗಳಿಂದ ಸ್ನೇಹ ಸಮ್ಮಿಲನ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಹಿರಿಯ ಸಾಹಿತಿ ಚಂದ್ರಶೇಖರ ವಸ್ತ್ರದ, ಉತ್ತಮ ಶಿಕ್ಷಕ ಮಾತ್ರ ಉತ್ತಮ ಸಮಾಜ ನಿರ್ಮಾಣ ಮಾಡುವ ವಿದ್ಯಾರ್ಥಿಗಳನ್ನು ಸೃಷ್ಟಿಸಲು ಸಾಧ್ಯ. ಶಿಕ್ಷಣ ಕೇವಲ ಪದವಿಗಷ್ಟೇ ಮೀಸಲಾಗಿರದೆ, ಉತ್ತಮ ವ್ಯಕ್ತಿತ್ವ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸಬೇಕೆಂದು ಹೇಳಿದರು.

ಎಚ್.ಬಿ. ರಡ್ಡೇರ, ಪಿ.ಬಿ. ಕರಾಟೆ, ಪಿ.ಎಸ್. ಸಜ್ಜನ, ಫಕ್ಕೀರಯ್ಯ ಹಿರೇಮಠ, ಶ್ರೀನಿವಾಸ ನಾಯಕ, ರವಿ ಕೋಡಿ, ಪ್ರಶಾಂತ ಕಾಳಗಿ, ಮೋಹನ ಲಕ್ಷ್ಮೇಶ್ವರ, ಲಲಿತಾ ಕೋಳಿವಾಡ, ಸರಿತಾಬೇಗಂ ಕುರ್ತಕೋಟಿ, ಶ್ರೀಕಾಂತ ಈಳಿಗೇರ, ಸುಮಂಗಲಾ ಗಿಡಕಾವು, ದೀಪಾ ಅಣ್ಣಿಗೇರಿ, ಪ್ರವೀಣ ಮುಳ್ಳೂರ, ಜಯಶ್ರೀ ಕುರಿ, ಮಲ್ಲಿಕಾರ್ಜುನ ಬಂಡಿವಾಡ, ಗೋಪಾಲ ಭರಮಗೌಡ್ರ, ಸಂಜೀವರೆಡ್ಡಿ ವೆಂಕರೆಡ್ಡಿ, ಮುತ್ತು ದಳವಾಯಿ, ಗಂಗಾಧರ ಹನಸಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಅಳವಂಡಿ ಸರಕಾರಿ ಪ.ಪೂ ಕಾಲೇಜು ಫಲಿತಾಂಶ



**■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿನ ಬೆಳ್ಳಟ್ಟಿಯ ಶ್ರೀ ಬಿ.ಪಿ. ಅಳವಂಡಿ ಬಾಲಕಿಯರ ಸರಕಾರಿ ಪದವಿಪೂರ್ವ ಕಾಲೇಜಿನ ಕಲಾ ವಿಭಾಗದಲ್ಲಿ ಸಂಜನಾ ಓಲಿ ಶೇ. 93.83 (ಪ್ರಥಮ), ರಾಜೇಶ್ವರಿ ಹೆಬಲಿ ಶೇ. 89.33(ದ್ವಿತೀಯ), ಶಾಂತಾ ಕೊಂಡ್ರು ಶೇ. 88.16%(ತೃತೀಯ), ವಾಣಿಜ್ಯ ವಿಭಾಗದಲ್ಲಿ ಚೈತ್ರಾ ಕುರ್ತಕೋಟಿ ಶೇ. 85.16(ಪ್ರಥಮ), ಸೌಮ್ಯಾ ಮೂಲಿಮನಿ ಶೇ. 84(ದ್ವಿತೀಯ), ಸೌಮ್ಯ ನರಗುಂದ ಶೇ. 82.66(ತೃತೀಯ) ಸ್ಥಾನದಲ್ಲಿ ಉತ್ತೀರ್ಣರಾಗಿದ್ದಾರೆ. ಎಸ್‌ಡಿಎಂಸಿ ಪದಾಧಿಕಾರಿಗಳು, ಪ್ರಾಚಾರ್ಯರು ಮತ್ತು ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

## ರಸ್ತೆ ಅಭಿವೃದ್ಧಿ ಕಾಮಗಾರಿ ಆರಂಭ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಜನತೆಯ ಬಹುದಿನಗಳ ಕನಸು ನನಸಾಗುತ್ತಿದೆ. ಇಲ್ಲಿನ ಬಸ್ ನಿಲ್ದಾಣದಿಂದ ಶ್ರೀ ಅನ್ನದಾನೇಶ್ವರ ಕಾಲೇಜಿನವರೆಗಿನ ರಸ್ತೆ ಕೆಟ್ಟು ಸಂಚಾರಕ್ಕೆ ದುಸ್ತರವಾಗಿತ್ತು. ಇದನ್ನು ದುರಸ್ತಿಪಡಿಸಬೇಕೆಂದು ಸಾರ್ವಜನಿಕರು ಹಲವಾರು ಬಾರಿ ಶಾಸಕರಲ್ಲಿ ಮನವಿ ಮಾಡಿದ್ದರು. ಈ ರಸ್ತೆಯನ್ನು ನೂತನವಾಗಿ ಅಭಿವೃದ್ಧಿಪಡಿಸಲು ಶಾಸಕ ಜಿ.ಎಸ್. ಪಾಟೀಲರು ಕಳೆದ ಮಾರ್ಚ್ 8ರಂದು ಭೂಮಿ ಪೂಜೆ ನೆರವೇರಿಸಿದ್ದರು. ಕಾಮಗಾರಿ ಪ್ರಾರಂಭಗೊಂಡಿರುವುದು ಸಾರ್ವಜನಿಕರಲ್ಲಿ ಸಂತಸ ಮೂಡಿಸಿದೆ.

ಪಟ್ಟಣದ ರೈತ ಸಂಪರ್ಕ ಕೇಂದ್ರದ ಮುಂಭಾಗದಿಂದ ಕಾಲೇಜುವರೆಗಿನ ರಸ್ತೆಯನ್ನು ಅಭಿವೃದ್ಧಿಪಡಿಸಲು ಶಾಸಕರು ಎರಡು ಕೋಟಿ ರೂ.ಗಳ ಅನುದಾನವನ್ನು ತಂದಿದ್ದಾರೆ. ಕಾಮಗಾರಿ ಬೇಗನೆ ಮುಗಿದು ಸಂಚಾರಕ್ಕೆ ಅನುಕೂಲವಾದರೆ ಸಾಕೆಂದು ಸಾರ್ವಜನಿಕರು ಕಾಯುತ್ತಿದ್ದಾರೆ.

ಈ ಕುರಿತು ಮಾತನಾಡಿದ ಶಹರ ಕಾಂಗ್ರೆಸ್ ಅಧ್ಯಕ್ಷ ಶಿವನಗೌಡ ಪಾಟೀಲ, ಈ ರಸ್ತೆಯನ್ನು ಅಭಿವೃದ್ಧಿಪಡಿಸಬೇಕೆನ್ನುವುದು ಸಾರ್ವಜನಿಕರ ಬಹು ದಿನಗಳ ಬೇಡಿಕೆಯಾಗಿತ್ತು. ಇದಕ್ಕೆ ಸ್ಪಂದಿಸಿರುವ ಶಾಸಕ ಜಿ.ಎಸ್. ಪಾಟೀಲರು ಎರಡು ಕೋಟಿ ರೂ.ಗಳ ಅನುದಾನವನ್ನು ಒದಗಿಸಿದ್ದಾರೆ. ರಸ್ತೆ ಕಾಮಗಾರಿ ಶೀಘ್ರವೇ ಮುಗಿದು ಜನ ಸಂಚಾರಕ್ಕೆ ಅನುಕೂಲವಾಗುವುದನ್ನೇ ಎಲ್ಲರೂ ಕಾಯುತ್ತಿದ್ದೇವೆ ಎಂದರು.

ಮಾಜಿ ಯೋಧ ಎಂ.ಎಸ್. ಮಲ್ಲನಗೌಡ್ರ ಪ್ರತಿಕ್ರಿಯಿಸಿ, ಎಲ್ಲರ ಬಯಕೆಯಂತೆ ರಸ್ತೆ ಅಭಿವೃದ್ಧಿ ಕಾಮಗಾರಿ ಪ್ರಾರಂಭವಾಗಿರುವುದು ಸಂತಸ ತಂದಿದೆ. ಗುತ್ತಿಗೆದಾರರು ಅವಸರಕ್ಕೆ ಬಿದ್ದು ಗುಣಮಟ್ಟದೊಂದಿಗೆ ರಾಜಿ ಮಾಡಿಕೊಳ್ಳದೆ, ಇದನ್ನೊಂದು ಉತ್ತಮ ಗುಣಮಟ್ಟದ ರಸ್ತೆಯನ್ನಾಗಿ ಅಭಿವೃದ್ಧಿಪಡಿಸಬೇಕು. ಕನಿಷ್ಠ 8–10 ವರ್ಷಗಳಾದರೂ ಈ ರಸ್ತೆ ಜನರ ಉಪಯೋಗಕ್ಕೆ ಬರುವಂತೆ ಅಭಿವೃದ್ಧಿಯಾಗಲಿ ಎಂದು ಹಾರೈಸಿದರು.




ಗದುಗಿನ ಶ್ರದ್ಧಾ ಸ್ವರ ಸಂಗೀತ ವೆಲ್ಫೇರ್ ಟ್ರಸ್ಟ್‌ನಲ್ಲಿ ಭಾರತ ರತ್ನ ಡಾ. ಬಿ.ಆರ್.ಅಂಬೇಡ್ಕರರ ಜಯಂತ್ಯುತ್ಸವ ಆಚರಿಸಲಾಯಿತು. ಪ್ರವೀಣ್ ಶೆಟ್ಟಿ ಕಾರ್ಯಕ್ರಮ ಉದ್ಘಾಟಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯದರ್ಶಿ ಜ್ಯೋತಿ ಕಬಾಡಿ ಅಂಬೇಡ್ಕರರ ಜೀವನದ ಕುರಿತು ಮಾತನಾಡಿದರು. ಅಧ್ಯಕ್ಷ ಉಜ್ವಲ್ ಕಬಾಡಿ ಮಾತನಾಡಿದರು. ವರ್ಷಾ ಕಲಕಂಬಿ ವಂದಿಸಿದರು. ಸಭೆಯಲ್ಲಿ ಮಹಬೂಬಸಬ್ ಸಿದ್ಧಿ, ಇಮಾಮ್ ಸಾಬ್ ಮೊರಬದ, ಡ್ಯಾನ್ಸ್ ಮಾಸ್ಟರ್ ಸಂತೋಷ್, ಅನಿಲಕುಮಾರ, ವೆಂಕಟೇಶ್ ಬನವಂತ, ಭೀಮಪ್ಪ ಇಟಗಿ ಮುಂತಾದವರಿದ್ದರು.

### ತಹಸೀಲ್ದಾರ ಕಚೇರಿಯಲ್ಲಿ ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರ ಅವರ 134ನೇ ಜನ್ಮದಿನಾಚರಣೆ

# ಅಂಬೇಡ್ಕರರು ದೇಶದ ಪ್ರೇರಕ ಶಕ್ತಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ವಿಶ್ವಜ್ಞಾನಿ, ಭಾರತರತ್ನ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರ ತತ್ವ, ಚಿಂತನೆ, ಆದರ್ಶವನ್ನು ಅಳವಡಿಸಿಕೊಂಡು ನವ ಭಾರತ ನಿರ್ಮಾಣಕ್ಕೆ ಬದ್ಧರಾಗೋಣ ಎಂದು ತಹಸೀಲ್ದಾರ ವಾಸುದೇವ ವಿ.ಸ್ವಾಮಿ ಹೇಳಿದರು.

ಅವರು ಸೋಮವಾರ ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರ ಅವರ 134ನೇ ಜನ್ಮದಿನಾಚರಣೆ ಸಂದರ್ಭದಲ್ಲಿ ಮಾತನಾಡಿದರು.

ಸರ್ವರಿಗೂ ಸಮಬಾಳು ಎಂಬ ತತ್ವದಡಿ ದೇಶದ ಎಲ್ಲ ವರ್ಗ, ಜಾತಿ ಮತ್ತು ಧರ್ಮಗಳ ಜನರಿಗೆ ಸಮಾನ ನ್ಯಾಯ ಕಲ್ಪಿಸಿದ ಅಸಾಮಾನ್ಯ ಪ್ರೇರಕಶಕ್ತಿ ಡಾ.ಅಂಬೇಡ್ಕರ. ಶತಮಾನಗಳಿಂದಲೂ ಶೋಷಣೆಗೊಳಗಾದವರಿಗೆ ಶಿಕ್ಷಣವೆಂಬ ಶಕ್ತಿಯನ್ನು ನೀಡಿ ಮೇಲೆತ್ತುವ ಸಮಾನ ಅವಕಾಶ ಕಲ್ಪಿಸಿ ಸಾಮಾಜಿಕ ಬದಲಾವಣೆಯ ಹರಿಕಾರರಾಗಿದ್ದಾರೆ. ನವಭಾರತದ ನಿರ್ಮಾತೃ, ಸಮಾನತೆಯ ಹರಿಕಾರ ಅಂಬೇಡ್ಕರರು ಬರೀ ವ್ಯಕ್ತಿಯಲ್ಲ, ದೇಶದ ಪ್ರೇರಕ ಶಕ್ತಿಯಾಗಿದ್ದಾರೆ. ವಿಶ್ವಶ್ರೇಷ್ಠ ಸಂವಿಧಾನ ಎಂಬ ಮಹಾಗ್ರಂಥವನ್ನು ದೇಶಕ್ಕೆ



ನೀಡಿ ದೇಶದ ಪ್ರತಿ ಪ್ರಜೆಗೂ ಸಮಾನ ನ್ಯಾಯ, ಹಕ್ಕು ಕಲ್ಪಿಸಿ ಎಲ್ಲರೂ ಸ್ವತಂತ್ರ, ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಮೂಲಾಧಾರವಾಗಿದ್ದಾರೆ ಎಂದರು.

ಪಿಎಸ್‌ಐ ನಾಗರಾಜ ಗಡಾದ, ಮುಖಂಡರಾದ ಪಿ.ಬಿ. ಕರಾಟೆ, ರಾಮಣ್ಣ ಲಮಾಣಿ (ಶಿಗ್ಲಿ) ಮಾತನಾಡಿದರು.

ದಲಿತ ನಾಯಕ ಗುರುನಾಥ ದಾನಪ್ಪನವರ ಮಾತನಾಡಿ, ಸಾಮಾಜಿಕ ನ್ಯಾಯಕ್ಕಾಗಿ ಸಂವಿಧಾನ ರಚಿಸುವ ಮೂಲಕ ಬಲಿಷ್ಠ ಭಾರತ ನಿರ್ಮಿಸುವ ಕನಸು ಸಾಕಾರಗೊಳಿಸುವಲ್ಲಿ ಅಂಬೇಡ್ಕರರು ತಮ್ಮನ್ನೇ ಸಮರ್ಪಿಸಿಕೊಂಡರು. ಸಮಾಜದಲ್ಲಿ ಶೈಕ್ಷಣಿಕ, ಧಾರ್ಮಿಕ, ರಾಜಕೀಯ ಹೀಗೆ ಎಲ್ಲ ರೀತಿಯ ಸ್ಥಾನಮಾನಗಳನ್ನು ಕಲ್ಪಿಸುವ ಜೊತೆಗೆ ಸ್ನೇಹ, ಪ್ರೀತಿ, ವಿಶ್ವಾಸಗಳಂತಹ ಮಾನವೀಯ ಮೌಲ್ಯಗಳನ್ನೊಳಗೊಂಡಿರುವುದೇ ನಿಜವಾದ ಧರ್ಮ ಎಂದು ಹೇಳಿದ ಅಂಬೇಡ್ಕರರ ತತ್ವ–ಸಿದ್ಧಾಂತಗಳು, ಸಂದೇಶ–ವಿಚಾರಗಳು ದಾರಿದೀಪವಾಗಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ವಿಜಯ ಕರಡಿ, ಸದಸ್ಯರಾದ ಮಹಾದೇವಪ್ಪ ಅಣ್ಣಿಗೇರಿ, ಮಹೇಶ ಹೊಗೆಸೊಪ್ಪಿನ, ಪ್ರವೀಣ ಬಾಳಿಕಾಯಿ, ರಾಜೀವ ಕುಂಬಿ, ಬಸವರಾಜ ಓದುನವರ, ರಮೇಶ ಗಡದವರ, ಮಹಾಂತೇಶ ಗುಡಿಸಲಮನಿ, ಪ್ರಕಾಶ ಕೊಂಚಿಗೇರಿಮಠ, ನೀಲಪ್ಪ ಪೂಜಾರ, ಅಮರೀಶ ತೆಂಬದಮನಿ, ಫಕ್ಕೀರೇಶ ಮ್ಯಾಟಣ್ಣವರ, ನಾಗರಾಜ ದೊಡ್ಡಮನಿ, ರಾಮಣ್ಣ ಅಡಗಿಮನಿ, ಅನಿಲ ಮುಳಗುಂದ, ಗಂಗಾಧರ ಮೆಣಸಿನಕಾಯಿ, ಸದಾನಂದ ನಂದೆಣ್ಣವರ, ಫಕ್ಕೀರೇಶ ನಂದೆಣ್ಣವರ, ಟಾಕಪ್ಪ ಸಾತಪುತೆ, ಕೆ.ಓ. ಹುಲಿಕಟ್ಟಿ, ಮನೋಹರ ಕರ್ಜಗಿ, ಜಗದೀಶ ಹುಲಿಗೆಮ್ಮನವರ, ಅನಿಲ ನಂದೆಣ್ಣವರ, ಹಜರೇಸಾಬ ಅರಳಹಳ್ಳಿ ಸೇರಿದಂತೆ ದಲಿತ ಸಮಾಜದ ಮುಖಂಡರು, ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು. ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ ನಿರ್ವಹಿಸಿದರು.

ಪಟ್ಟಣದ ಅಂಬೇಡ್ಕರ ನಗರ, ಪುರಸಭೆ, ತಾ.ಪಂ ಕಾರ್ಯಾಲಯ, ಸರ್ಕಾರಿ ಕಚೇರಿಗಳು, ಶಾಲಾ–ಕಾಲೇಜುಗಳಲ್ಲಿ ಅಂಬೇಡ್ಕರ ಜಯಂತಿ ಆಚರಿಸಲಾಯಿತು.

## ಮೂಢನಂಬಿಕೆಯಿಂದಲೂ ದುಷ್ಪರಿಣಾಮಗಳಿವೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಮಾದಕ ವ್ಯಸನಗಳಿಗೆ ದಾಸರಾಗುವುದರಿಂದ ಅನೇಕ ದುಷ್ಪರಿಣಾಮಗಳು ಉಂಟಾಗುತ್ತವೆ ಎಂಬುದು ಎಲ್ಲರಿಗೂ ಗೊತ್ತಿರುವ ಸತ್ಯ. ಆದರೆ ಮೂಢನಂಬಿಕೆಗಳನ್ನು ನಂಬುವುದರಿಂದಲೂ ಅಷ್ಟೇ ಪ್ರಮಾಣದ ಹಾನಿ ಸಂಭವಿಸುತ್ತದೆ ಎಂದು ರಾಜ್ಯ ಪ್ರಶಸ್ತಿ ವಿಜೇತ ಶಿಕ್ಷಕ ಅಶೋಕ ಉಂಡಿ ಅಭಿಪ್ರಾಯಪಟ್ಟರು.

ಅವರು ಇತ್ತೀಚೆಗೆ ನಗರದ ನವಜ್ಯೋತಿ ವ್ಯಸನಮುಕ್ತಿ ಹಾಗೂ ಪುನರ್ವಸತಿ ಕೇಂದ್ರದಲ್ಲಿ ಪವಾಡ ರಹಸ್ಯ ಬಯಲು ಕಾರ್ಯಕ್ರಮದದಲ್ಲಿ ಮಾತನಾಡಿದರು. ನಮ್ಮ ಭಕ್ತಿ–ನಂಬಿಕೆಗಳು ನಮ್ಮ ಬಲವಾಗಿರಬೇಕೇ ಹೊರತು ಮತ್ತೊಬ್ಬರ ಪಾಲಿಗೆ ಬಂಡವಾಳವಾಗಬಾರದು. ದೇವರು ಮತ್ತು ಧರ್ಮದ ಕುರಿತು ಜನರ ಭಯ ಭಕ್ತಿಗಳನ್ನು ಕೆಲವು ನಕಲಿ ಪವಾಡ ಪುರುಷರು ತಮ್ಮ ಬಂಡವಾಳ ಮಾಡಿಕೊಂಡು ಮುಗ್ಧ ಜನರಿಗೆ ಮೋಸ ಮಾಡುತ್ತಾರೆ. ಜನ ಈ ಕುರಿತು ಜಾಗೃತರಾಗಬೇಕು ಜೊತೆಗೆ ಮದ್ಯಪಾನ–ಧೂಮಪಾನದಂತಹ ವ್ಯಸನಗಳು ಸಮಾಜಕ್ಕೆ ಅಂಟಿದ ಶಾಪ. ಅವುಗಳು ಸಮಾಜದಿಂದ ತೊಲಗಬೇಕು ಎಂದರು. ಕಾರ್ಯಕ್ರಮವನ್ನು ಉದ್ಘಾಟಿಸಿದ ಮೊಹಮ್ಮದ್ ಶಾ ನದಾಫ್ ಮಾತನಾಡಿ, ಶಿಕ್ಷಕ ವೃತ್ತಿಯನ್ನು ಕೆಲಸವೆಂದು ಭಾವಿಸದೇ ತಪಸ್ಸಿನಂತೆ ಆಚರಿಸುತ್ತಿರುವ ಅಶೋಕ ಉಂಡಿ ನಮಗೆಲ್ಲ ಮಾದರಿ. ಸ್ವಸ್ಥ ಸಮಾಜ ನಿರ್ಮಾಣದಲ್ಲಿ ಮೂಢನಂಬಿಕೆ ವಿರುದ್ಧ ಜನ ಜಾಗೃತರಾಗುವುದು ಅತೀ ಅವಶ್ಯಕ ಎಂದರು. ಬಸವರಾಜ ಬೇವಿನಮರದ, ಹನುಮಂತ ಗೌಡ ಪಾಟೀಲ ಮಾತನಾಡಿದರು. ಶಿವಾನಂದ ಹಡಗಲಿ, ಶ್ವೇತಾ ಕೊಳೆಕಾರ್ ಸ್ವಾಗತಿಸಿದರು. ಗಾಯತ್ರಿ ಪ್ರಾರ್ಥಿಸಿದರು.0 ಭಾಗ್ಯಲಕ್ಷ್ಮೀ ನಿರೂಪಿಸಿದರು. ನವಜ್ಯೋತಿ ಸಂಸ್ಥೆಯ ಸಿಬ್ಬಂದಿ ಹಾಗೂ ಚಿಕಿತ್ಸಾರ್ಥಿಗಳು ಹಾಜರಿದ್ದರು.




## ಕುಟುಂಬಗಳ ಕಣ್ಣೊರೆಸುವ ಕಾರ್ಯ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ವತಿಯಿಂದ ನಿರಂತರವಾಗಿ ನಡೆಯುತ್ತಿರುವ ಮದ್ಯವರ್ಜನ ಶಿಬಿರಗಳಿಂದ ನೊಂದ ಕುಟುಂಬಗಳ ಕಣ್ಣೊರೆಸುವ ಕೆಲಸ ಆಗುತ್ತಿದೆ ಎಂದು ಸಂಸ್ಥೆಯ ಜಿಲ್ಲಾ ನಿರ್ದೇಶಕ ಯೋಗೀಶ್ ಎ ಹೇಳಿದರು.

ಅವರು ರವಿವಾರ ಶಿರಹಟ್ಟಿಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್, ಶಿರಹಟ್ಟಿ ತಾಲೂಕು ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಟ್ರಸ್ಟ್, ಧರ್ಮಸ್ಥಳ ಶ್ರೀ ಮಂಜುನಾಥೇಶ್ವರ ವ್ಯಸನಮುಕ್ತಿ ಸಂಶೋಧನಾ ಕೇಂದ್ರ, ರಾಜ್ಯ ಮದ್ಯಪಾನ ಸಂಯಮ ಮಂಡಳಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ 1913ನೇ ಮದ್ಯವರ್ಜನ ಶಿಬಿರದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಮಾಜದಲ್ಲಿ ಸ್ವಾಸ್ತ್ಯವನ್ನು ಕಾಪಾಡುವುದಕ್ಕಾಗಿ ಡಾ. ವೀರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಪ್ರತಿ ತಾಲೂಕಿನಲ್ಲಿಯೂ ಸಹ ಇಂತಹ ಶಿಬಿರಗಳು ನಡೆಯುತ್ತಿದ್ದು, ಇದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ಶಿಬಿರಾರ್ಥಿಗಳಿಗೆ ಹೇಳಿದರು.

ಶಾಸಕ ಡಾ. ಚಂದ್ರು ಲಮಾಣಿ ಕಾರ್ಯಕ್ರಮ ಉದ್ಘಾಟಿಸಿದರು. ಅಜ್ಜು ಪಾಟೀಲ, ಆನಂದಸ್ವಾಮಿ ಗಡ್ಡದ್ದೇವರಮಠ, ಗುರುನಾಥ ದಾನಪ್ಪನವರ, ಕೆ.ಎ. ಬಳಿಗೇರ, ಎಂ.ಕೆ. ಲಮಾಣಿ, ಮಹಾಂತೇಶ ದಶಮನಿ, ಫಕ್ಕೀರೇಶ ರಟ್ಟಿಹಳ್ಳಿ, ಹುಮಾಯೂನ್ ಮಾಗಡಿ, ಫಕ್ಕೀರೇಶ ಮ್ಯಾಟಣ್ಣವರ, ಪ್ರಕಾಶ ಮದ್ದಿನ, ರಾಜು ಕುಂಬಿ, ಪ್ರಕಾಶ ಭೋರಶೆಟ್ಟರ, ರಾಮಣ್ಣ ಕಂಬಳಿ, ಶ್ರೀನಿವಾಸ ಬಾರಬಾರ, ನಂದಾ ಪಲ್ಲೇದ, ನಾಗೇಶ ವೈ.ಎ, ಜಗದೀಶ ಬ್ಯಾಳಿ, ತಾಲೂಕಾ ಯೋಜನಾಧಿಕಾರಿ ಪುನೀತ ಓಲೇಕಾರ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಅಂಬೇಡ್ಕರರ ಆದರ್ಶಗಳು ಅಮರ



**■ವಿಜಯಸಾಕ್ಷಿ ಸುದ್ದಿ, ಡಂಬಳ**

ಅಂಬೇಡ್ಕರರು ಅನುಭವಿಸಿದ ಸಂಕಷ್ಟಗಳೇ ಭಾರತಕ್ಕೆ ಸಂವಿಧಾನ ನೀಡುವಂತಾಯಿತು. ಇಂತಹ ಧೀಮಂತ ನಾಯಕರ ಆದರ್ಶಗಳು ಸದಾ ಕಾಲ ಇರುತ್ತವೆ ಎಂದು ತಾಲೂಕಾ ಅಂಗನವಾಡಿ ಸಂಘಟನೆಯ ಅಧ್ಯಕ್ಷೆ ಸುಶೀಲಾ ಚಲವಾದಿ ಹೇಳಿದರು.

ವರು ಡಂಬಳ ಗ್ರಾಮದ 10ನೇ ಅಂಗನವಾಡಿಯಲ್ಲಿ ಡಾ. ಬಿ.ಆರ್. ಅಂಬೇಡ್ಕರರ ಜಯಂತ್ಯುತ್ಸವ ನಿಮಿತ್ತ ಸೋಮವಾರ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಮಾಜಿ ಸೈನಿಕ ವಾಸಪ್ಪ ಕಾಶಭೋವಿ ಮಾತನಾಡಿ, ಸಂವಿಧಾನವನ್ನು ಅರ್ಥೈಸಿಕೊಂಡಾಗ ಅಂಬೇಡ್ಕರರ ಜಯಂತಿ ಆಚರಣೆಗೆ ಅರ್ಥ ಬರಲಿದೆ ಎಂದು ಹೇಳಿದರು.

ಮಾಜಿ ಸೈನಿಕ ರಾಘವೇಂದ್ರ ಹಡಪದ ಮಾತನಾಡಿ, ದೇಶದಲ್ಲಿ ಪ್ರಜಾಪ್ರಭುತ್ವ ಗಟ್ಟಿಯಾಗಿ ನೆಲೆಗೊಳ್ಳಲು ಸಂವಿಧಾನವೇ ಮೂಲ ಕಾರಣ. ಇಂತಹ ಪವಿತ್ರ ಗ್ರಂಥದ ಅಡಿಯಲ್ಲಿ ಬದುಕು ಕಟ್ಟಿಕೊಳ್ಳಲು ಹಾಗೂ ಜೀವನದ ಪಯಣ ಸುಗಮವಾಗಿ ಸಾಗಿಸಲು ಅಂಬೇಡ್ಕರರೇ ನಮಗೆಲ್ಲ ಪ್ರೇರಣೆ ಎಂದು ಹೇಳಿದರು.


ಈ ಸಂದರ್ಭದಲ್ಲಿ ಸತ್ಯಮ್ಮ ಒಂಟಲಭೋವಿ, ಸುಮಂಗಲಾ ಡಂಬಳ, ಸಿದ್ದಮ್ಮ ಬನ್ನಿಕೊಪ್ಪ ಸೇರಿದಂತೆ ಮಹಿಳೆಯರು, ಗ್ರಾಮಸ್ಥರು, ವಿದ್ಯಾರ್ಥಿಗಳು ಇದ್ದರು.

## ಡಾ. ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಡಾ. ಬಾಬಾಸಾಹೇಬ ಅಂಬೇಡ್ಕರರ 134ನೇ ಜಯಂತಿಯ ನಿಮಿತ್ತ ಅವರ ಪುತ್ಥಳಿಗಳಿಗೆ ಭಾರತೀಯ ಜನತಾ ಪಕ್ಷದ ವತಿಯಿಂದ ಮಾಲಾರ್ಪಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ, ಎಸ್.ಸಿ. ಮೋರ್ಚಾ ಜಿಲ್ಲಾಧ್ಯಕ್ಷ ಮಂಜುನಾಥ ಮುಳಗುಂದ, ಪಕ್ಷದ ಹಿರಿಯರಾದ ಎಂ.ಎಸ್. ಕರಿಗೌಡ್ರ, ಜಗನ್ನಾಥಸಾ ಭಾಂಡಗೆ, ಅಶೋಕ ಕುಡತಿನಿ, ಸುರೇಶ ಮರಳಪ್ಪನವರ, ಶಿವಣ್ಣ ಮುಳಗುಂದ, ಸುರೇಶ ಚಲವಾದಿ, ಚಂದ್ರು ತಡಸದ, ರಾಘವೇಂದ್ರ ಯಳವತ್ತಿ, ಲಿಂಗರಾಜ ಪಾಟೀಲ, ಉಡಚಪ್ಪ ಹಳ್ಳಿಕೇರಿ, ಮಂಜುನಾಥ ತಳವಾರ, ಉಷಾ ಮಹೇಶ ದಾಸರ, ನಾಗರಾಜ ತಳವಾರ, ಬಿ.ಎಸ್. ಲದ್ವಾ, ಮಂಜುನಾಥ ಕೊಟ್ನಿಕಲ್, ಪದ್ಮಿನಿ ಮುತ್ತಲದಿನ್ನಿ, ವಾಯ್.ಪಿ. ಅಡ್ನೂರ, ಬೂದಪ್ಪ ಹಳ್ಳಿ, ಎಂ.ಎಂ. ಹಿರೇಮಠ, ಅನಿಲ ಅಬ್ಬಿಗೇರಿ, ಅಶೋಕ ಸಂಕಣ್ಣವರ, ಸಂತೋಷ ಅಕ್ಕಿ, ಶಶಿಧರ ದಿಂಡೂರ, ಸುಧೀರ ಕಾಟೀಗರ, ದೇವಪ್ಪ ಗೊಟೂರ, ಸಂತೋಷ ಕಲ್ಯಾಣಿ, ಕೆ.ಪಿ. ಕೋಟಿಗೌಡ್ರ, ಹನುಮಂತಪ್ಪ ದಿಂಡೆಣ್ಣವರ, ರಾಜೇಶ ಕಟ್ಟಿಮನಿ, ಮಂಜುನಾಥ ಶಾಂತಗೇರಿ, ವಾಸು ಹುಯಿಲಗೋಳ, ವಿಜಯಲಕ್ಷ್ಮೀ ಮಾನ್ವಿ, ಮೇಘಾ ಕೊಟ್ಟೂರ, ಶಂಕರ ಕಾಕಿ, ಶಿವಾನಂದ ಹರಿಜನ, ವಿನಾಯಕ ಹೊರಕೇರಿ, ವಿನೋದ ಹಂಸನೂರ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.



## ಪ್ರಜಾಪ್ರಭುತ್ವ ಗಟ್ಟಿಗೊಳಿಸಿದ್ದು ಅಂಬೇಡ್ಕರರ ಸಂವಿಧಾನ

▶▶ ಮೊದಲನೇ ಪುಟದಿಂದ




ಕಾರ್ಯಕ್ರಮದಲ್ಲಿ ಅಂಬೇಡ್ಕರರ ಕುರಿತಾರ ಕವಿತೆಗಳ ಕವನ ಸಂಕಲನವನ್ನು ಬಿಡುಗಡೆ ಮಾಡಲಾಯಿತು. ಕವನ ಸಂಕಲನದ ಸಂಪಾದಕ ಮಂಡಳಿಯ ಸದಸ್ಯರನ್ನು ಸನ್ಮಾನಿಸಲಾಯಿತು. ಸೃಷ್ಟಿ ಜನಪದ ಕಲಾತಂಡದ ರಮೇಶ ಕಾಳೆ ಹಾಗೂ ದಲಿತಾ ಕಲಾ ಮಂಡಳಿಯ ಶರೀಫ್ ಬಿಳಿಯಲಿ ಹಾಗೂ ಸಂಗಡಿಗರು ಗೀತೆಗಳನ್ನು ಹಾಡಿದರು. ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಮಹೇಶ ಪೋತದಾರ ಭೀಮ ಗೀತೆ ಹಾಡಿದರು.

ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಡಾ. ಪ್ರಶಾಂತ ಜೆ.ಸಿ ಡಾ. ಬಿ.ಆರ್. ಅಂಬೇಡ್ಕರ ಕುರಿತು ಉಪನ್ಯಾಸ ನೀಡಿದರು. ನಿವೃತ್ತ ಪ್ರಾಚಾರ್ಯ ಪ್ರೊ. ಡಿ.ಜಿ. ಜೋಗಣ್ಣನವರ ಹಾಗೂ ನಿವೃತ್ತ ಉಪನ್ಯಾಸಕ ಪ್ರೊ. ಸತೀಶ ಪಾಸಿ ಅವರುಗಳು ಡಾ. ಬಾಬು ಜಗಜೀವನರಾಂ ಕುರಿತು ಉಪನ್ಯಾಸ ನೀಡಿದರು.

ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಎಸ್. ಎನ್. ಬಳ್ಳಾರಿ, ಕೃಷ್ಣ ಪರಾಪೂರ, ಬಸವರಾಜ ಕಡೇಮನಿ, ದುರ್ಗೇಶ್ ವಿಭೂತಿ, ಮಾರ್ತಾಂಡಪ್ಪ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತರಾದ ರಾಜಾರಾಮ ಎಸ್.ಪವಾರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಡಾ. ರವಿ ಗುಂಜೀಕರ, ಉಪವಿಭಾಗಾಧಿಕಾರಿ ಗಂಗಪ್ಪ ಸೇರಿದಂತೆ ಇತರರು ಇದ್ದರು.



ಕಾಂಗ್ರೆಸ್ ಮೀನುಗಾರರ ಸಮಿತಿ ಗದಗ–ಬೆಟಗೇರಿ ಶಹರ ವಿಭಾಗದ ಅಧ್ಯಕ್ಷರು ಹಾಗೂ ಗದಗ ಜಿಲ್ಲಾ ಎಸ್‌ಸಿ & ಎಸ್‌ಟಿ ದೌರ್ಜನ್ಯ ನಿಯಂತ್ರಣ ಸಮಿತಿಯ ಸದಸ್ಯ ಸಂಗಮೇಶ ಹಾದಿಮನಿಯವರು ನಗರಸಭೆಯ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರರ ಪುತ್ಥಳಿಗೆ ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಹರೀಶ ಬಾರಕೇರ, ಕಾಂಗ್ರೆಸ ಮುಖಂಡರಾದ ವಸಂತ ಸಿದ್ಧಮ್ಮನಹಳ್ಳಿ ಉಪಸ್ಥಿತರಿದ್ದರು.

# ಎ.28ರಂದು ಶ್ರೀ ರೇಣುಕಾಚಾರ್ಯರ ಜಯಂತ್ಯುತ್ಸವ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ಎ.28ರಂದು ಪಟ್ಟಣದ ಶ್ರೀ ರಂಭಾಪುರಿ ಲಿಂ. ವೀರಗಂಗಾಧರ ಕಲ್ಯಾಣ ಮಂಟಪದಲ್ಲಿ ಜಗದ್ಗುರು ಶ್ರೀ ರೇಣುಕಾಚಾರ್ಯರ ಜಯಂತ್ಯುತ್ಸವ ಆಚರಿಸಲು ನಿರ್ಧರಿಸಲಾಯಿತು.

ಈ ಕುರಿತು ನಡೆದ ಪೂರ್ವಭಾವಿ ಸಭೆಯಲ್ಲಿ ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ ಮಾತನಾಡಿ, ಜಗತ್ತಿಗೆ ಶಾಂತಿ ಸಂದೇಶ ಸಾರಿದ ವೀರಶೈವ ಮತ ಸಂಸ್ಥಾಪಕ, ವಿಶ್ವ ಕಲ್ಯಾಣ



ಯೋಗೀಶ್ವರರಾದ ಆದಿ ಜಗದ್ಗುರು ರೇಣುಕಾಚಾರ್ಯರ ಜಯಂತ್ಯುತ್ಸವ ಆಚರಿಸುವುದು ನಮ್ಮೆಲ್ಲರ ಕರ್ತವ್ಯ. ಸಮಾಜದ, ವೈಯಕ್ತಿಕ ಬದುಕಿನ ಎಲ್ಲ ಸಂಕಷ್ಟಗಳು ದೂರವಾಗಿ ಶಾಂತಿ, ನೆಮ್ಮದಿಯ ಸಮಾಜಕ್ಕಾಗಿ ಮಹಾನ್ ಪುಣ್ಯ ಪುರುಷರ ಆರಾಧನೆಯೇ ಮೂಲ ಮಂತ್ರವಾಗಿದೆ. ಆಡಂಬರಕ್ಕೆ ಅವಕಾಶ ನೀಡದೇ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಂಡು ರೇಣುಕಾಚಾರ್ಯರ ಜಯಂತ್ಯುತ್ಸವವನ್ನು ಅರ್ಥಪೂರ್ಣವಾಗಿ ಆಚರಿಸೋಣ ಎಂದರು.

ಅಂದು ಬೆಳಿಗ್ಗೆ ಶ್ರೀ ಸೋಮೇಶ್ವರ ತೇರಿನ ಮನೆಯ ಆವರಣದಿಂದ ರೇಣುಕಾಚಾರ್ಯರ ಭಾವಚಿತ್ರದ ಮೆರವಣಿಗೆ ಪಟ್ಟಣದ ಪ್ರಮುಖ ಬೀದಿಗಳ ಮೂಲಕ ಸಮುದಾಯ ಭವನ ತಲುಪುವುದು. ನಂತರ ನಡೆಯುವ ಧರ್ಮಸಭೆಯ ಸಾನ್ನಿಧ್ಯವನ್ನು ಮುಕ್ತಿಮಂದಿರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ವಹಿಸುವರು. ಶ್ರೀ ಕರೇವಾಡಿಮಠದ ಶ್ರೀ ಮಳೆ ಮಲ್ಲಿಕಾರ್ಜುನ ಮಹಾಸ್ವಾಮಿಗಳು ಉಪಸ್ಥಿತರಿರುವರು. ಗಣ್ಯರು, ಜನಪ್ರತಿನಿಧಿಗಳು ಪಾಲ್ಗೊಳ್ಳುವರು ಎಂದು ಸಂಘಟಕರು ತಿಳಿಸಿದರು.

ಸಭೆಯಲ್ಲಿ ಆನಂದ ಮೆಕ್ಕಿ, ಎಸ್.ಎಸ್. ಬಾಳೆಹಳ್ಳಿಮಠ, ಕುಬೇರಪ್ಪ ಮಹಾಂತಶೆಟ್ಟರ, ಚಂಬಣ್ಣ ಬಾಳಿಕಾಯಿ, ಬಸವೇಶ ಮಹಾಂತಶೆಟ್ಟರ, ಸಿ.ಆರ್. ಲಕ್ಕುಂಡಿಮಠ, ಚನ್ನಪ್ಪ ಕೋಲಕಾರ, ರುದ್ರುಸ್ವಾಮಿ ಘಂಟಾಮಠ, ಎಸ್.ವಿ. ಅಂಗಡಿ, ಬಸವರಾಜ ಬೆಂಡಿಗೇರಿ, ಗಂಗಾಧರ ಮೆಣಸಿನಕಾಯಿ, ಐ.ಸಿ. ಹತ್ತಿಕಾಳ, ಎನ್.ವ್ಹಿ. ಹೇಮಗಿರಿಮಠ, ಎಂ.ಕೆ. ಕಳ್ಳಿಮಠ ಸೇರಿ ಮುಖಂಡರು ಇದ್ದರು.

# ಶ್ರೀ ವೀರಭದ್ರೇಶ್ವರ ಜಾತ್ರೆ ಪ್ರಯುಕ್ತ ಪುರಾಣ ಪ್ರವಚನ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇಲ್ಲಿನ ಬೆಳ್ಳಟ್ಟಿಯಲ್ಲಿ ಎ.22ರಂದು ಜರುಗಲಿರುವ ಶ್ರೀ ವೀರಭದ್ರೇಶ್ವರ ಹಾಗೂ ಬಸವೇಶ್ವರ ಜಾತ್ರಾ ಮಹೋತ್ಸವ ಮತ್ತು ನೂತನ ಗಡ್ಡಿತೇರಿನ ಲೋಕಾರ್ಪಣೆ ಅಂಗವಾಗಿ ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ಎ.13ರಿಂದ ಎ.25ರವರೆಗೆ ಪ್ರತಿ ದಿನ ಸಂಜೆ 6 ಗಂಟೆಗೆ ಶ್ರೀ ವೀರಭದ್ರೇಶ್ವರ ಪುರಾಣ ಪ್ರವಚನ ಜರುಗಲಿದೆ.

ಎ. 15ರಂದು ಜ.ಶಿರಹಟ್ಟಿಯ ಫಕೀರ ಸಿದ್ದರಾಮ ಸ್ವಾಮೀಜಿ, ಎ. 16ರಂದು ಜ.ಫ. ದಿಂಗಾಲೇಶ್ವರ ಸ್ವಾಮೀಜಿ, ಗದಗ-ಸೊರಟೂರಿನ ಷ.ಬ್ರ.ಫಕೀರೇಶ್ವರ ಶಿವಾಚಾರ್ಯ ಸ್ವಾಮೀಜಿ, ಎ. 17ರಂದು ಬಳಗಾನೂರಿನ ಶಿವಶಾಂತವೀರ ಶರಣರು, ನರೇಗಲ್‌ನ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ, ಎ. 18ರಂದು ಹಾವೇರಿಯ ಡಾ. ಗುರುಲಿಂಗ ಸ್ವಾಮೀಜಿ, ಎ. 19ರಂದು ಹೊಸಳ್ಳಿಯ ಅಭಿನವ ಬೂದೀಶ್ವರ ಸ್ವಾಮೀಜಿ, ಎ. 20ರಂದು ಗದುಗಿನ ಜ.ಸದಾಶಿವಾನಂದ ಸ್ವಾಮೀಜಿ ಪುರಾಣ ಪ್ರವಚನ ನಡೆಸಲಿದ್ದಾರೆ.

ಎ. 21ರಂದು ಬೆಳ್ಳಟ್ಟಿಯ ರಾಮಲಿಂಗೇಶ್ವರ ದಾಸೋಹಮಠದ ಬಸವರಾಜ ಸ್ವಾಮೀಜಿ, ಮೈಸೂರು ಹಾಗೂ ಬ್ರಹನ್ಮಠ ಬನ್ನಿಕೊಪ್ಪದ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿಗಳ ನೇತೃತ್ವದಲ್ಲಿ ಪುರಾಣ ಮಂಗಲಗೊಳ್ಳಲಿದೆ ಎಂದು ಸಮಿತಿಯು ಪ್ರಕಟಣೆ ತಿಳಿಸಿದೆ.

---

ಡಾ. ಬಿ.ಆರ್. ಅಂಬೇಡ್ಕರ್, ಡಾ. ಜಗಜೀವನರಾಂ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಶಾಸಕ ಡಾ. ಚಂದ್ರು ಲಮಾಣಿ

# ಡಾ. ಅಂಬೇಡ್ಕರ್ ಶೋಷಿತರ ಧ್ವನಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ದೇಶದಲ್ಲಿ ದೀನ-ದಲಿತ, ಶೋಷಿತ ವರ್ಗಗಳಿಗೆ ನಿಜವಾದ ಧ್ವನಿಯಾಗಿ ಸ್ವಾಭಿಮಾನ ಮೂಡಿಸುವಲ್ಲಿ ಶ್ರಮಿಸಿದ ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ ಅವರ ಪಾತ್ರ ಮಹತ್ವದ್ದಾಗಿದೆ. ಪರಿಶಿಷ್ಟರು, ಹಿಂದುಳಿದವರು, ಶೋಷಿತ ಜನಾಂಗದವರಿಗೆ ಸಂವಿಧಾನತ್ಮಕ ಹಕ್ಕುಗಳನ್ನು ಕಲ್ಪಿಸುವಲ್ಲಿ ಶ್ರಮಿಸಿದರಲ್ಲದೇ, ವಿಶ್ವವೇ ಹೆಮ್ಮೆ ಪಡುವಂತಹ ಭಾರತದ ಸಂವಿಧಾನವನ್ನು ರಚಿಸಿದ ಮಹಾನ್ ಶಿಲ್ಪಿಯಾಗಿದ್ದಾರೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಅಭಿಪ್ರಾಯಪಟ್ಟರು.

ಸೋಮವಾರ ಶಿರಹಟ್ಟಿಯಲ್ಲಿ ತಾಲೂಕಾಡಳಿತ, ತಾಲೂಕು ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ಪಟ್ಟಣ ಪಂಚಾಯಿತಿ ಶಿರಹಟ್ಟಿ ಹಾಗೂ ಶಿರಹಟ್ಟಿ ತಾಲೂಕಿನ ಎಲ್ಲ ದಲಿತ ಸಂಘಟನೆಗಳ ಅಶ್ರಯದಲ್ಲಿ ತಹಸೀಲ್ದಾರ ಕಚೇರಿ ಅವರಣದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರ 134ನೇ ಮತ್ತು ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಂ ಅವರ 118ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಉಪನ್ಯಾಸಕರಾಗಿ ಆಗಮಿಸಿದ ಹೊಂಬಳ ಸರಕಾರಿ ಪ.ಪೂ ಕಾಲೇಜಿನ ಪ್ರಭಾರ ಪ್ರಾಚಾರ್ಯ ಹನಮಂತಪ್ಪ ಎಂ.ದೊಡ್ಡಮನಿ, ಡಾ.ಬಾಬು ಜಗಜೀವನರಾಮರ ಜೀವನ ಹಾಗೂ ಸಾಧನೆಗಳ ಕುರಿತು ಉಪನ್ಯಾಸ ನೀಡಿದರಲ್ಲದೆ, ಶೈಕ್ಷಣಿಕ ಪ್ರಗತಿಯಿಂದ ಮಾತ್ರ ದಲಿತ ಸಮುದಾಯದವರ ಸರ್ವಾಂಗೀಣ ಪ್ರಗತಿ ಸಾಧ್ಯ. ಈ ಹಿನ್ನೆಲೆಯಲ್ಲಿ ದಲಿತ ಸಮುದಾಯದ ಸಹೋದರರು ತಪ್ಪದೇ ತಮ್ಮ ಮಕ್ಕಳಿಗೆ ಗುಣಾತ್ಮಕ ಶಿಕ್ಷಣವನ್ನು ಕೊಡಿಸಬೇಕೆಂದು ಹೇಳಿದರು.



ಕಾರ್ಯಕ್ರಮಕ್ಕೂ ಮುನ್ನ ಪಟ್ಟಣದ ಶ್ರೀ ಜ.ಫಕೀರೇಶ್ವರ ಮಠದಿಂದ ಡಾ. ಬಿ.ಆರ್. ಅಂಬೇಡ್ಕರ ಮತ್ತು ಡಾ. ಬಾಬು ಜಗಜೀವನರಾಂ ಅವರ ಬೃಹತ್ ಭಾವಚಿತ್ರದ ಮೆರವಣಿಗೆಗೆ ಶಾಸಕ ಡಾ. ಚಂದ್ರು ಲಮಾಣಿ ಮತ್ತು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ ಚಾಲನೆ ನೀಡಿದರು.

ಪ.ಪಂ ಅಧ್ಯಕ್ಷೆ ದೇವಕ್ಕ ಗುಡಿಮನಿ, ತಹಸೀಲ್ದಾರ ಅನಿಲ ಬಡಿಗೇರ, ಸಿಪಿಐ ನಾಗರಾಜ ಮಾಢಳ್ಳಿ, ತಾ.ಪಂ ಇಒ ಆರ್.ವಿ. ದೊಡ್ಡಮನಿ, ಸಮಾಜ ಕಲ್ಯಾಣಾಧಿಕಾರಿ ಗೋಪಾಲ ಲಮಾಣಿ, ಆರ್‌ಎಫ್‌ಓ ಮೇಘನಾ ಎಚ್, ಬಿಇಓ ನಾಣ್ಕಿನಾಯ್ಕ, ಪಿಆರ್‌ಇಡಿ ಎಇಇ ಮಾರುತಿ ರಾಠೋಡ, ಆರ್‌ಡಬ್ಲ್ಯುಎಸ್ ಎಇಇ ಮಲ್ಲಿಕಾರ್ಜುನ ಪಾಟೀಲ, ಹೊನ್ನಪ್ಪ ಶಿರಹಟ್ಟಿ, ಹುಮಾಯೂನ್ ಮಾಗಡಿ, ನಾಗರಾಜ ಲಕ್ಕುಂಡಿ, ಡಿ.ಕೆ. ಹೊನ್ನಪ್ಪನವರ, ಪ.ಪಂ ಸದಸ್ಯರಾದ ಸಂದೀಪ ಕಪ್ಪತ್ತನವರ, ಫಕ್ಕಿರೇಶ ರಟ್ಟಿಹಳ್ಳಿ, ಜಾನು ಲಮಾಣಿ, ದೇವಪ್ಪ ಲಮಾಣಿ, ಎಂ.ಕೆ. ಲಮಾಣಿ, ಶಿವನಗೌಡ ಪಾಟೀಲ, ನಾಗರಾಜ ಪೋತರಾಜ, ರಮೇಶ ಮಲ್ಲಾಡದ, ಮೋಹನ ಗುತ್ತೆಮ್ಮನವರ, ಮಾರ್ತಾಂಡಪ್ಪ ಹಾದಿಮನಿ, ಹನಮಂತಪ್ಪ ಹುಯಿಲಗೋಳ, ತಿಮ್ಮರೆಡ್ಡಿ ಮರಡ್ಡಿ, ಸಂಜೀವ ಪೋತರಾಜ, ರವಿ ಗುಡಿಮನಿ, ಮುತ್ತುರಾಜ ಭಾವಿಮನಿ, ಅಕ್ಬರ ಯಾದಗೇರಿ, ಈರಣ್ಣ ಚವ್ಹಾಣ, ಸಿದ್ದು ಹಲಸೂರ ಮುಂತಾದವರು ಉಪಸ್ಥಿತರಿದ್ದರು.

> ಡಾ. ಬಾಬು ಜಗಜೀವನರಾಮರ ಆದರ್ಶಗಳನ್ನು ಪಾಲಿಸುವದರ ಜತೆಗೆ ಜೀವನ ಸಾಧನೆ, ಆದರ್ಶಗಳು, ತತ್ವ ಸಿದ್ಧಾಂತಗಳನ್ನು ಮುಂದಿನ ಪೀಳಿಗೆಗೆ ತಿಳಿಯಪಡಿಸುವ ಕಾರ್ಯ ನಡೆಯಬೇಕಿದೆ. ಈ ನಿಟ್ಟಿನಲ್ಲಿ ಅವರುಗಳ ಜನ್ಮದಿನಾಚರಣೆಯಂತಹ ಕಾರ್ಯಕ್ರಮಗಳು ಪೂರಕವಾಗಿವೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.


---

ಪೂರ್ಣಗೊಳ್ಳಿರುವ ಮಂತ್ರಾಲಯ ರಾಘವೇಂದ್ರ ಸ್ವಾಮಿ ಶಾಖಾ ಮಠದ ಕಟ್ಟಡ

# ಪ್ರಾಣ ಪ್ರತಿಷ್ಠೆಗೆ ಶ್ರೀಗಳಿಗೆ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕಳಸಾಪುರ ರಸ್ತೆಯಲ್ಲಿ ನಿರ್ಮಾಣವಾಗುತ್ತಿರುವ ಮಂತ್ರಾಲಯ ಶಾಖಾ ಮಠದ ನೂತನ ಕಟ್ಟಡ ಪೂರ್ಣಗೊಳ್ಳುವ ಹಂತಕ್ಕೆ ಬಂದಿರುವ ವಿಷಯವನ್ನು ಮಂತ್ರಾಲಯ ರಾಘವೇಂದ್ರ ಸ್ವಾಮಿ ಮಠದ ಪೀಠಾಧಿಪತಿಗಳಾದ ಶ್ರೀ ಸುಭುದೇಂದ್ರ ತೀರ್ಥ ಸ್ವಾಮೀಜಿಯವರ ಗಮನಕ್ಕೆ ತಂದು ಪ್ರಾಣ ಪ್ರತಿಷ್ಠೆ ಕಾರ್ಯಕ್ರಮಕ್ಕೆ ಕಟ್ಟಡ ನಿರ್ಮಾಣ ಸಮಿತಿಯ ಗೌರವಾಧ್ಯಕ್ಷರು ಹಾಗೂ ಮಾಜಿ ಶಾಸಕರಾದ ಡಿ.ಆರ್. ಪಾಟೀಲ ಹಾಗೂ ಮಂತ್ರಾಲಯ ರಾಘವೇಂದ್ರ ಪಾದಯಾತ್ರೆ ಕಮಿಟಿಯ ಅಧ್ಯಕ್ಷ ರಾಘವೇಂದ್ರ ಕಾಲವಾಡ, ಆರ್ಯವೈಶ್ಯ ಸಮಾಜದ ಗಣ್ಯರು, ಕಳಸಾಪುರ ಹಾಗೂ ಕಿರಟಗೆರೆಯ ಸದಸ್ಯರು ಮಂತ್ರಾಲಯಕ್ಕೆ ತೆರಳಿ ಆಹ್ವಾನ ನೀಡಿದರು.



ಹಿಂದಿನ ಪೀಠಾಧಿಪತಿಗಳಾದ ಶ್ರೀ ಸುಯತೀಂದ್ರ ತೀರ್ಥರು ಭೂಮಿ ಪೂಜೆ ಮಾಡಿ ಶ್ರೀಮಠದ ಅಡಿಗಲ್ಲು ಸಮಾರಂಭ ನೆರವೇರಿಸಿದ್ದರು. ಮಂತ್ರಾಲಯ ಶ್ರೀಗಳು ಪ್ರಾಣ ಪ್ರತಿಷ್ಠೆಯ ಮೂಲಕ ಎಲ್ಲ ರಾಘವೇಂದ್ರ ಸ್ವಾಮಿ ಭಕ್ತರಿಗೆ ಬೃಂದಾವನಲ್ಲಿ ಅಂತರ್ಗತರಾದ ರಾಘವೇಂದ್ರ ಸ್ವಾಮಿಗಳು ನೀಡಿದ ವಚನದಂತೆ 700 ವರ್ಷಗಳ ಕಾಲ ಭಕ್ತರಿಗೆ ಕಾಮಧೇನು, ಕಲ್ಪವೃಕ್ಷವಾಗಿ ಮನೋಭೀಷ್ಟೆ ಈಡೇರಿಸುತ್ತಿರುವ ಶ್ರೀ ಗುರು ರಾಘವೇಂದ್ರರ ಸ್ವಾಮಿಗಳ ಆಗಮನ ಪ್ರಾಣ ಪ್ರತಿಷ್ಠೆಯ ಮೂಲಕ ಶೀಘ್ರದಲ್ಲಿ ನೆರವೇರಲಿದೆ ಎಂದು ಪೀಠಾಧಿಪತಿಗಳಾದ ಶ್ರೀ ಸುಭುದೇಂದ್ರ ತೀರ್ಥ ಸ್ವಾಮೀಜಿಯವರು ಆಶೀರ್ವದಿಸಿದರು.

ವೇದಿಕೆಯ ಕಾರ್ಯಕ್ರಮದಲ್ಲಿ ಗಣ್ಯಮಾನ್ಯರಿಗೆ ಆಹ್ವಾನ ನೀಡಲಾಗುವುದು. ಕಾರ್ಯಕ್ರಮಕ್ಕೆ ಆಗಮಿಸುವ ಭಕ್ತರಿಗೆ ಮಂತ್ರೋಕ್ತ ಆಶೀರ್ವಾದ, ಮಂತ್ರಾಕ್ಷತೆ, ಮುದ್ರಾಧಾರಣ, ಭಕ್ತರಿಗೆ ಪ್ರಸಾದ ವ್ಯವಸ್ಥೆಯನ್ನು ಹಲವಾರು ಸಮಿತಿಗಳ ರಚನೆ ಮಾಡಿ ಕಾರ್ಯಕ್ರಮ ಯಶಸ್ವಿ ಮಾಡುತ್ತೇವೆ ಎಂದು ಗೌರವಾಧ್ಯಕ್ಷರಾದ ಡಿ.ಆರ್. ಪಾಟೀಲ ಶ್ರೀಗಳಲ್ಲಿ ಅರಿಕೆ ಮಾಡಿಕೊಂಡರು.

---

# ಡಾ. ಅಂಬೇಡ್ಕರರು ಸರ್ವ ಜನಾಂಗದ ನಾಯಕ

■ವಿಜಯಸಾಕ್ಷಿ ಸುದ್ದಿ, ಗದಗ

ಬಾಬಾಸಾಹೇಬ್ ಎಂದೇ ಜನಪ್ರಿಯರಾಗಿರುವ ಡಾ. ಬಿ.ಆರ್. ಅಂಬೇಡ್ಕರರು ಕೇವಲೊಂದು ಜಾತಿಗೆ ಸೀಮಿತವಾಗದೆ ಇಡೀ ದೇಶದಲ್ಲಿ ಮಾದರಿಯಾಗಿವುದಲ್ಲದೆ ಸರ್ವ ಜನಾಂಗಕ್ಕೂ ನ್ಯಾಯ ಒದಗಿಸಲು ಸಂವಿಧಾನದ ರಚಿಸುವ ಮೂಲಕ ಸರ್ವರಲ್ಲಿ ಸಮಾನತೆ ತೋರಿದ ನಾಯಕರಾಗಿದ್ದಾರೆ ಎಂದು ಬಿಜೆಪಿ ಯುವ ಮುಖಂಡ ವಸಂತ ಪಡಗದ ಅಭಿಪ್ರಾಯಪಟ್ಟರು.



ಗದಗ-ಬೆಟಗೇರಿ ನಗರಸಭೆ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ 134ನೇ ಜಯಂತ್ಯುತ್ಸವದ ನಿಮಿತ್ತ ಅಂಬೇಡ್ಕರರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ಅಂಬೇಡ್‌ಕರರು ಭಾರತೀಯ ಇತಿಹಾಸದಲ್ಲಿ ಮರೆಯಲಾಗದ ಸ್ಮರಣೀಯ ವ್ಯಕ್ತಿಯಾಗಿದ್ದು, ಅವರ ಕೊಡುಗೆ ಅಪಾರವಾಗಿದೆ. ಭಾರತೀಯ ಸಂವಿಧಾನದ ಮುಖ್ಯ ಶಿಲ್ಪಿಯಾಗಿ ಎಲ್ಲ ಜಾತಿಗಳಿಗೆ ಸಮಾನತೆ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಅವರು ತಮ್ಮನ್ನು ತಾವು ಅರ್ಪಿಸಿಕೊಂಡಿದ್ದಾರೆ ಎಂದರು.

ಡಾ. ಬಿ.ಆರ್. ಅಂಬೇಡ್ಕರ್ ಅವರನ್ನು ಎಂದೂ ಹಿಂದುಳಿದ ನಾಯಕ ಎಂದು ನಾನು ನಂಬುವುದಿಲ್ಲ. ಅವರು ಎಂದಿಗೂ ಎಲ್ಲ ಜನಾಂಗದ ನಾಯಕರು. ಸಮಾಜದ ಕಟ್ಟಕಡೆಯ ಶೋಷಿತರಿಂದ ಹಿಡಿದು ಮೇಲ್ವರ್ಗದ ಪ್ರತಿಯೊಬ್ಬರೂ ಇವರು ರಚಿಸಿದ ಸಂವಿಧಾನದಿಂದ ಸಮಾನತೆ ತೋರಿದ್ದಾರೆ ಎಂದು ಪಗಡದ ಹೇಳಿದರು.

ಈ ಸಂದರ್ಭದಲ್ಲಿ ಶ್ರೀಕಾಂತ ರಾಮಗಿರಿ, ಶುಭಂ, ಮನೋಜ್ ಮೇದಾರ, ವಿನೋದ, ಕೃಷ್ಣಾ, ಶ್ರೀಕಾಂತ, ಆಸಿಫ್, ಸುನಿಲ್ ಸೇರಿದಂತೆ ಹಲವರಿದ್ದರು.

---

# ಲಕ್ಷ್ಮೇಶ್ವರದ ಭಾವೈಕ್ಯತೆ ಎಲ್ಲರಿಗೂ ಮಾದರಿಯಾಗಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಹಿಂದೂ-ಮುಸ್ಲಿಮರ ಭಾವೈಕ್ಯತೆಯ ಕೇಂದ್ರವಾಗಿರುವ ದೂದಪೀರಾಂ ದರ್ಗಾಕ್ಕೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ರವಿವಾರ ಭೇಟಿ ನೀಡಿದರು.



ದೂದಪೀರಾಂರವರ 136ನೇ ಉರುಸು ಮೂರು ದಿನಗಳಿಂದ ಅದ್ದೂರಿಯಾಗಿ ನಡೆಯುತ್ತಿದ್ದು, ದೂದನಾನಾ ಮಹಾತ್ಮರ ಗದ್ದುಗೆಗೆ ಪ್ರಾರ್ಥನೆ ಸಲ್ಲಿಸಿ, ಕಾಣಿಕೆ ಸಮರ್ಪಿಸಿದ ಸಚಿವರು ಮಾತನಾಡಿ, ಲಕ್ಷ್ಮೇಶ್ವರದಲ್ಲಿ ಹಲವಾರು ಮಹಾಪುರುಷರು ಜನ್ಮವೆತ್ತಿದ್ದು, ನಿಜಕ್ಕೂ ಈ ನಾಡು ಪುಣ್ಯಭೂಮಿಯಾಗಿದೆ. ಎಲ್ಲ ಜಾತಿ-ಮತದ ಮಹಾಪುರುಷರು ಇಲ್ಲಿ ಆಗಿಹೋಗಿರುವದರಿಂದ ಇದಕ್ಕೆ ಭಾವೈಕ್ಯತೆಯ ನಾಡೆಂದು ಹೆಸರು ಬಂದಿದೆ. ಸರ್ವರೂ ಒಂದಾಗಿ ಬಾಳಲು ಕರೆನೀಡುವ ಮೂಲಕ ಈ ಲಕ್ಷ್ಮೇಶ್ವರವನ್ನು ತಮ್ಮ ಕರ್ಮಭೂಮಿಯನ್ನಾಗಿ ಮಾಡಿಕೊಂಡು ಇದಕ್ಕೊಂದು ಅರ್ಥ ನೀಡಿದ್ದಾರೆ. ಇಂತಹ ಸೌಹಾರ್ದತೆಯ ಸಮರ್ಥ ಪ್ರತಿಪಾದಕರಾಗಿ, ಭಾವೈಕ್ಯತೆಯ ಹರಿಕಾರರಾಗಿ ಅಗ್ರಮಾನ್ಯರಾಗಿರುವ ದೂದಪೀರಾಂ ಮಹಾತ್ಮರ ಉರುಸು ಕಾರ್ಯಕ್ರಮ ಅದ್ದೂರಿಯಾಗಿ ನಡೆಯುತ್ತಿದ್ದು, ಐತಿಹಾಸಿಕ ಪ್ರಸಿದ್ಧ ಸೋಮೇಶ್ವರ ದೇವಸ್ಥಾನ, ಮುಕ್ತಿಮಂದಿರ ಹಾಗೂ ದೂದನಾನಾ ದರ್ಗಾದಿಂದ ಪಟ್ಟಣದ ಕೀರ್ತಿ ಹೆಚ್ಚುವಂತಾಗಿದೆ. ಇಲ್ಲಿನ ಭಾವೈಕ್ಯತೆ ಪರಂಪರೆ ಎಲ್ಲರಿಗೂ ಮಾದರಿಯಾಗಲಿ ಎಂದು ಹೇಳಿದರು.

ಸಚಿವರು ದರ್ಗಾಕ್ಕೆ ಆಗಮಿಸಿದ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ಉಪಾಧ್ಯಕ್ಷ ಪೀರದೋಷ ಆಡೂರ, ದರ್ಗಾ ಕಮಿಟಿ ಅಧ್ಯಕ್ಷ ಸುಲೇಮಾನಸಾಬ್ ಕಣಕೆ ಸ್ವಾಗತಿಸಿದರು. ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಯುವ ಮುಖಂಡ ಆನಂದಸ್ವಾಮಿ ಗಡ್ಡದೇವರಮಠ, ಜಯಕ್ಕ ಕಳ್ಳಿ, ರಾಜಣ್ಣ ಕುಂಬಿ, ಸತೀಶಗೌಡ ಪಾಟೀಲ, ವಿರುಪಾಕ್ಷಪ್ಪ ಪಡಗೇರಿ, ರಾಜು ಮಡಿವಾಳರ, ಎಸ್.ಕೆ. ಹವಾಲ್ದಾರ, ಎಂ.ಎಂ. ಗದಗ, ಮಹೇಶ ಹೊಗೆಸೊಪ್ಪಿನ್, ಈರಣ್ಣ ಅಂಕಲಕೋಟಿ ಮುಂತಾದವರಿದ್ದರು.

---

ಡಾ. ಅಂಬೇಡ್ಕರರ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಉಪನ್ಯಾಸಕ ಕಳಕಪ್ಪ ಚವರಿ ಅಭಿಮತ

# ಡಾ. ಬಾಬಾಸಾಹೇಬರದು ಬಹುಮುಖ ವ್ಯಕ್ತಿತ್ವ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಅಂಬೇಡ್ಕರರು ಸಂವಿಧಾನದ ಮೂಲಕ ಭಾರತವನ್ನು ಸಮಾನತೆ, ಭ್ರಾತೃತ್ವ ಮತ್ತು ಜಾತ್ಯತೀತ ಪರಿಕಲ್ಪನೆಗಳ ಅಡಿಯಲ್ಲಿ ನಿರ್ಮಿಸುವುದಕ್ಕೆ ಅಡಿಪಾಯ ಹಾಕಿದ್ದರು. ಸಮಾನತೆ, ಅಸ್ಪಶ್ಯತೆ ನಿವಾರಣೆಗಾಗಿ ಹೋರಾಡಿದ ಮಹಾನ್ ನಾಯಕರಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಒಬ್ಬರಾಗಿದ್ದಾರೆ ಎಂದು ವಕೀಲ, ಉಪನ್ಯಾಸಕ ಕಳಕಪ್ಪ ಚವರಿ ಹೇಳಿದರು.

ಇಲ್ಲಿನ ಪಟ್ಟಣ ಪಂಚಾಯಿತಿಯಲ್ಲಿ ಸೋಮವಾರ ಡಾ. ಬಿ.ಆರ್. ಅಂಬೇಡ್ಕರ್ ಅವರ 134ನೇ ಜಯಂತ್ಯುತ್ಸವದ ನಿಮಿತ್ತ ಡಾ. ಅಂಬೇಡ್ಕರರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.



ಬಹುಮುಖ ವ್ಯಕ್ತಿತ್ವವನ್ನು ಹೊಂದಿದ್ದ ಅಂಬೇಡ್ಕರ್ ಅಧ್ಯಯನಶೀಲತೆ ಅಪಾರವಾದುದ್ದು. ತಮ್ಮ ಶಿಕ್ಷಣ ಪಾಂಡಿತ್ಯದಿಂದ ಭಾರತಕ್ಕೆ ಸಂವಿಧಾನವನ್ನು ರಚಿಸಿದ ಮಹಾನ್ ವ್ಯಕ್ತಿಯಾಗಿದ್ದಾರೆ. ಅಪ್ರತಿಮರಾದ ಡಾ. ಬಿ.ಆರ್. ಅಂಬೇಡ್ಕರರ ಸಿದ್ಧಾಂತಗಳನ್ನು ವ್ೈಗ್ೂಡಿಸಿಕ್ೂಂಡ್ು ಮುನ್ನಡೆಯಬೇಕಾಗಿದೆ ಎಂದರು.

ಪತ್ರಕರ್ತ ನಿಂಗಪ್ಪ ಚಲವಾದಿ ಮಾತನಾಡಿ, ಸ್ವಾತಂತ್ರ್ಯ ಪೂರ್ವದಲ್ಲಿದ್ದ ಜಾತಿ ವ್ಯವಸ್ಥೆ ಸೇರಿದಂತೆ ಎಲ್ಲ ರೀತಿಯ ಸಂಕಷ್ಟಗಳ ವಿರುದ್ಧ ಹೋರಾಡುವ ಮೂಲಕ ಜಗತ್ತಿನ ಜ್ಞಾನಿಗಳಲ್ಲಿ ಒಬ್ಬರಾಗಿ ಎಲ್ಲರ ಗಮನ ಸೆಳೆದರು. ದೇಶದ ಶೋಷಿತ ವರ್ಗದ ಪ್ರಗತಿಗಾಗಿ ಇಡೀ ಜೀವನವನ್ನೆ ಮೀಸಲಿಟ್ಟಿದ್ದರು ಎಂದರು.

ಪ.ಪಂ ಮುಖ್ಯಾಧಿಕಾರಿ ಮಹೇಶ ನಿಡಶೇಶಿ ಮಾತನಾಡಿ, ಅಂಬೇಡ್ಕರ್ ಅವರನ್ನು ಜಯಂತಿ ದಿನಕ್ಕೆ ಮಾತ್ರ ನೆನಪಿಸಿಕೊಳ್ಳಬಾರದು. ಅವರ ತತ್ವ ಹಾಗೂ ಆದರ್ಶಗಳನ್ನು ಪಾಲನೆ ಮಾಡಬೇಕಿದೆ ಎಂದರು.

ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಸದಸ್ಯರಾದ ಈರಪ್ಪ ಜೋಗಿ, ಮಲ್ಲಿಕಸಾಬ ರೋಣದ, ನಾಮನಿರ್ದೇಶಕ ಸದಸ್ಯರಾದ ಶೇಖಪ್ಪ ಕೆಂಗಾರ, ಕಳಕನಗೌಡ ಪೊಲೀಸ್‌ಪಾಟೀಲ, ಮುಖಂಡರಾದ ಯಲ್ಲಪ್ಪ ಮಣ್ಣೊಡ್ಡರ, ನಿಂಗನಗೌಡ ಲಕ್ಕನಗೌಡ್ರ, ಅಲ್ಲಾಭಕ್ಷಿ ನದಾಫ್, ಸಿದ್ದಪ್ಪ ಚಲವಾದಿ, ಮಹಾದೇವಪ್ಪ ಚಲವಾದಿ, ಚಂದ್ರಪ್ಪ ಚಲವಾದಿ, ಹುಚ್ಚಿರಪ್ಪ ಚಲವಾದಿ, ಮುತ್ತಪ್ಪ ಚಲವಾದಿ, ಹುಲಗಪ್ಪ ಚಲವಾದಿ, ಲಕ್ಷ್ಮಣ ಚಲವಾದಿ, ಕಾಶಪ್ಪ ಚಲವಾದಿ, ಶರಣಪ್ಪ ಚಲವಾದಿ, ಮೈಲಾರಪ್ಪ ಚಳ್ಳಮರದ, ರಮೇಶ ಹಲಗಿಯವರ, ಅಡಿವೆಪ್ಪ ಮೆಣಸಗಿ, ಎಂ.ಎಚ್. ಸೀತಿಮನಿ, ಆರೀಫ್ ಮಿರ್ಜಾ, ಶಂಕ್ರಪ್ಪ ದೊಡ್ಡಣ್ಣವರ ಸೇರಿದಂತೆ ಇತರರಿದ್ದರು.

> ಪ.ಪಂ ಸ್ಥಾಯಿ ಕಮಿಟಿ ಚೇರಮನ್ ಮುತ್ತಪ್ಪ ನೂಲ್ಕಿ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರ್ ಭಾರತದ ಸಾಮಾಜಿಕ ಸಮಾನತೆಯ ಹರಿಕಾರ. ಸಾಮಾಜಿಕವಾಗಿ ಬಹಿಷ್ಕಾರಕ್ಕೆ ಒಳಗಾದ ದೀನ ದಲಿತರ ಏಳಿಗೆಗೆ ತಮ್ಮ ಜೀವನವನ್ನೇ ಮುಡುಪಾಗಿಟ್ಟರು. ಅವರ ಆದರ್ಶಗಳು ಎಲ್ಲ ವರ್ಗದ ಜನರಿಗೂ ಮಾದರಿಯಾಗಿವೆ ಎಂದರು.

---

# ಪ್ರತಿಯೊಬ್ಬರೂ ಸುಶಿಕ್ಷಿತರಾಗಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಣದಿಂದ ಮಾತ್ರ ಜೀವನದಲ್ಲಿ ಪ್ರಗತಿ ಕಾಣಲು ಸಾಧ್ಯ ಎಂಬ ಅಂಬೇಡ್ಕರರ ಚಿಂತನೆ, ಆದರ್ಶಗಳು ಗ್ರಾಮೀಣ ಜನರ ಜೀವನಕ್ಕೆ ಸೂಕ್ತವಾಗಿವೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಹೇಳಿದರು.

ಅವರು ತಾಲೂಕಿನ ಗೋಜನೂರು ಗ್ರಾಮದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಪ್ರಾರಂಭವಾಗಿರುವ ಕಂದಕ ಬದು ನಿರ್ಮಾಣ ಕಾಮಗಾರಿ ಸ್ಥಳದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ 134ನೇ ಜಯಂತ್ಯುತ್ಸವದಲ್ಲಿ ಡಾ. ಅಂಬೇಡ್ಕರರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಸಲ್ಲಿಸಿ ನರೇಗಾ ಕೂಲಿಕಾರ್ಮಿಕರನ್ನು ಉದ್ದೇಶಿಸಿ ಮಾತನಾಡಿದರು.



ನರೇಗಾ ಕೂಲಿಕಾರ್ಮಿಕರು ಶಿಕ್ಷಣವನ್ನು ಪಡೆದುಕೊಂಡು ಒಳ್ಳೆಯ ಸಂಘಟನೆ, ಹೋರಾಟಗಳಿಂದ ಜೀವನವನ್ನು ಕಟ್ಟಿಕೊಳ್ಳಬೇಕು. ಕೂಲಿಯ ಮೊತ್ತ ರೂ. 370ಕ್ಕೆ ಏರಿಕೆಯಾಗಿದ್ದು, ದುಡಿಯುವ ಕೈಗಳಿಗೆ ಮತ್ತಷ್ಟು ಬಲ ಸಿಕ್ಕಂತಾಗಿದೆ. ಗ್ರಾ.ಪಂ ಆಡಳಿತ ಮಂಡಳಿ ನಿರಂತರವಾಗಿ ಕೆಲಸ ನೀಡಲು ಆಸಕ್ತಿ ವಹಿಸಿದ್ದು, ನರೇಗಾ ಕೂಲಿಕಾರ್ಮಿಕರು ಇದರ ಉಪಯೋಗವನ್ನು ಪಡೆದುಕೊಳ್ಳಬೇಕೆಂದು ಸೂಚಿಸಿದರು.

ಈ ವೇಳೆ ಗ್ರಾ.ಪಂ ಅಧ್ಯಕ್ಷ ಮಂಜುನಾಥ ಚಲವಾದಿ, ಉಪಾಧ್ಯಕ್ಷ ಎಂ.ಎಸ್. ಪಾಟೀಲ್, ಸದಸ್ಯರಾದ ಗಂಗಾಧರ್ ಕೆ, ನೀಲವ್ವ ಪಾಟೀಲ್, ನೀಲವ್ವ ಹರಿಜನ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಎಸ್.ಎಫ್. ಮಾಳವಾಡ, ತಾಲೂಕು ನರೇಗಾ ಸಿಬ್ಬಂದಿ, ಬಿಎಫ್‌ಟಿ, ಜಿಕೆಎಂ, ಕಾಯಕ ಬಂಧುಗಳು ಹಾಗೂ ಗ್ರಾ.ಪಂ ಸಿಬ್ಬಂದಿಗಳು ಹಾಜರಿದ್ದರು.


---

# ಜಾತಿ ಜನಗಣತಿಯ ಬಗ್ಗೆ ಅನುಮಾನ ಮೂಡಿದೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರ್ಕಾರ ಮತ್ತೊಮ್ಮೆ ಜಾತಿ ಜನಗಣತಿಗೆ ಮುಂದಾಗಲಿ ಎಂದು ತಾಲೂಕಿನ ಶಿಗ್ಲಿ ಗ್ರಾಮದ ಧರ್ಮಾಭಿಮಾನಿ ವೀರಣ್ಣ ಪವಾಡದ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

ಈ ಬಗ್ಗೆ ಅವರು ಪತ್ರಿಕಾ ಪ್ರಕಟಣೆ ನೀಡಿ, ರಾಜ್ಯದಲ್ಲಿ ಜಾತಿ ಜನಗಣತಿ ವರದಿಯ ಬಗ್ಗೆ ಸಾರ್ವಜನಿಕ ವಲಯದಲ್ಲಿ ಸಾಕಷ್ಟು ಅನುಮಾನ ಮೂಡಿದೆ. ಎಲ್ಲೋ ಕುಳಿತು ತಯಾರು ಮಾಡಿರುವ ವರದಿಯ ಬದಲಾಗಿ ಮತ್ತೊಮ್ಮೆ ಮನೆ ಮನೆಗೆ ತೆರಳಿ ಜಾತಿ ಜನಗಣತಿ ಮಾಡಬೇಕು ಎಂದು ಆಗ್ರಹಿಸಿದ್ದಾರೆ.



ಇದೇ ಜಾತಿ ಜನಗಣತಿ ವರದಿ ಮುಂದುವರಿಸಿದರೆ ಸಮಾಜದಲ್ಲಿ ಸಂಘರ್ಷಕ್ಕೆ ಕಾರಣವಾಗುತ್ತದೆ. ವೀರಶೈವ ಲಿಂಗಾಯತರು, ಒಕ್ಕಲಿಗರು ಈಗಾಗಲೇ ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಜಾತಿಗಣತಿ ವರದಿ ಸರಿಯಾದ ರೀತಿಯಲ್ಲಿ ಆಗಿಲ್ಲ ಎಂಬ ಕೂಗು-ಕೊರಗಿದ್ದು, ಮತ್ತೊಮ್ಮೆ ಸಮೀಕ್ಷೆ ನಡೆಸುವುದು ಒಳಿತು. ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಇದಕ್ಕೆ ವಿರೋಧ ವ್ಯಕ್ತಪಡಿಸಿದೆ. ಈ ವರದಿಯಿಂದ ನಾಡಿನಲ್ಲಿ ಜಾತಿ ಸಂಘರ್ಷ ಇನ್ನಷ್ಟು ಹೆಚ್ಚಾಗಿ ಸಮಾಜದಲ್ಲಿ ಅಶಾಂತಿಗೆ ಕಾರಣವಾಗಬಹುದು. ಈ ಬಗ್ಗೆ ಇನ್ನೊಮ್ಮೆ ಯೋಚನೆ ಮಾಡುವ ಅಗತ್ಯವಿದೆ ಎಂದು ಹೇಳಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka